ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 113 RNI Number : KNKAN/25/A2770 02-05-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :113 ರಾಯಚೂರು 02-05-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ಇರಾನ್ ಯುದ್ಧ ಮುಗಿದ ಅಧ್ಯಾಯ ; ಟ್ರಂಪ್ ದಿಢೀರ್ ಘೋಷಣೆ



ವಾಷಿಂಗ್ಟನ್, ಮೇ 1

ಕಳೆದ ತಿಂಗಳು ಜಾರಿಗೆ ಬಂದ ಕದನ ವಿರಾಮದ ಹಿನ್ನೆಲೆಯಲ್ಲಿ ಇರಾನ್ ವಿರುದ್ಧದ ಯುದ್ಧವು ಮುಕ್ತಾಯಗೊಂಡಿದೆ ಎಂದು ಟ್ರಂಪ್ ಆಡಳಿತ ದಿಢೀರ್ ಘೋಷಣೆ ಮಾಡಿದೆ. ಈ ಘೋಷಣೆಯು ಕೇವಲ ಯುದ್ಧದ ನಿಲ್ಲಿಸುವುದಷ್ಟೇ ಅಲ್ಲದೆ, ಅಮೆರಿಕದ ಸಂಸತ್ತಾದ ಕಾಂಗ್ರೆಸ್‌ನಿಂದ ಪಡೆಯಬೇಕಾದ ಕಡ್ಡಾಯ ಅನುಮೋದನೆಯನ್ನು ತಪ್ಪಿಸುವ ಒಂದು ಕಾರ್ಯತಂತ್ರ ಎಂದು ಪರಿಗಣಿಸಲಾಗಿದೆ.

ಅಮೆರಿಕದ ಕಾನೂನಿನ ಪ್ರಕಾರ, ಅಧ್ಯಕ್ಷರು ಯಾವುದೇ ಸೇನಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದ 60 ದಿನಗಳ ಒಳಗೆ ಕಾಂಗ್ರೆಸ್‌ನ ಅನುಮೋದನೆ ಪಡೆಯುವುದು ಕಡ್ಡಾಯ. ಆದರೆ, ಏಪ್ರಿಲ್ 7 ರಿಂದ ಅಮೆರಿಕ ಮತ್ತು ಇರಾನ್ ಪಡೆಗಳ ನಡುವೆ ಯಾವುದೇ ಗುಂಡಿನ ಚಕಮಕಿ ನಡೆದಿಲ್ಲ ಎಂದು ಯುದ್ಧ ಕಾರ್ಯದರ್ಶಿ ಪೀಟ್ ಹೆಗ್ಸೆತ್ ವಾದಿಸಿದ್ದಾರೆ.

ಕದನ ವಿರಾಮ ಜಾರಿಯಲ್ಲಿರುವುದರಿಂದ ಈ 60 ದಿನಗಳ ಕಾಲಮಿತಿಯು ತಾತ್ಕಾಲಿಕ'ವಾಗಿ ಸ್ಥಗಿತಗೊಳ್ಳುತ್ತದೆ ಅಥವಾ ನಿಲ್ಲುತ್ತದೆ ಎಂಬುದು ಶ್ವೇತಭವನದ ವಾದವಾಗಿದೆ.ಟ್ರಂಪ್ ಆಡಳಿತದ ಈ ಹೊಸ ಹೇಳಿಕೆಯನ್ನು ಡೆಮೋಕ್ರಾಟ್‌ಗಳು ತೀವ್ರವಾಗಿ ವಿರೋಧಿಸಿದ್ದಾರೆ. ಸೆನೆಟರ್ ಟಿಮ್ ಕೈನೆ ಮಾತನಾಡಿ, ಕಾನೂನಿನ ಚೌಕಟ್ಟಿನಲ್ಲಿ ಈ ವಾದಕ್ಕೆ ಮಾನ್ಯತೆ ಇಲ್ಲ ಮತ್ತು ಇದು ಯುದ್ಧದ ಕುರಿತು ಗಂಭೀರ ಕಾನೂನು ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದು ಎಚ್ಚರಿಸಿದ್ದಾರೆ.

ಅಮೆರಿಕದ ಜನರ ಮೇಲೆ ಈ ಯುದ್ಧವನ್ನು ಅನಗತ್ಯವಾಗಿ ಹೇರಲಾಗಿದೆ ಎಂದು ವಿರೋಧ ಪಕ್ಷದ ನಾಯಕರು ಕಿಡಿಕಾರಿದ್ದಾರೆ. ಕಾಂಗ್ರೆಸ್ ತನ್ನ ಅಧಿಕಾರವನ್ನು ಸೀಮಿತಗೊಳಿಸುತ್ತಿರುವುದನ್ನು ಆಗಾಗ ಟೀಕಿಸುವ ಅಧ್ಯಕ್ಷ ಟ್ರಂಪ್, ಮುಂದಿನ ಮಿಲಿಟರಿ ಆಯ್ಕೆಗಳ ಕುರಿತು ಶೀಘ್ರದಲ್ಲೇ ಉನ್ನತ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುತ್ತೇನೆ ಎಂದು ಹೇಳಿಕೆ ನೀಡಿದ್ದಾರೆ.

ಇರಾನ್ ಜೊತೆ ರಹಸ್ಯವಾಗಿ ಮಾತುಕತೆಗಳು ನಡೆಯುತ್ತಿವೆ ಮತ್ತು ಆ ದೇಶದ ಆರ್ಥಿಕತೆಯು ಅಮೆರಿಕದ ದಿಗ್ಬಂಧನದಿಂದಾಗಿ ಕುಸಿಯುತ್ತಿದೆ ಎಂದು ಟ್ರಂಪ್ ತಿಳಿಸಿದ್ದಾರೆ. ಶ್ವೇತಭವನ ಮತ್ತು ಕಾಂಗ್ರೆಸ್

3ನೇ ಪುಟ.....

ವಾಣಿಜ್ಯ ಸಿಲಿಂಡರ್‌ಗಳ ಬೆಲೆ 993 ರೂ. ಏರಿಕೆ: ಹೊಸ ದರ ಜಾರಿ ಆದೇಶ



ಹೈದರಾಬಾದ್,ಮೇ.01-

ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದ ಹಿನ್ನೆಲೆಯಲ್ಲಿ ಜಾಗತಿಕ ಇಂಧನ ಪೂರೈಕೆ ಬಿಕ್ಕಟ್ಟಿನ ನಡುವೆ, ದೇಶಾದ್ಯಂತ 19 ಕೆಜಿ ವಾಣಿಜ್ಯ ಸಿಲಿಂಡರ್‌ಗಳ ಬೆಲೆಯನ್ನು ಮೇ 1 (ಶುಕ್ರವಾರ) ರಿಂದ ಜಾರಿಗೆ ಬರುವಂತೆ 993 ರೂ. ಹೆಚ್ಚಿಸಲಾಗಿದೆ. ಆದರೆ, ಪೆಟ್ರೋಲ್, ಡೀಸೆಲ್ ಮತ್ತು ಗೃಹಬಳಕೆ ಎಲ್‌ಪಿಜಿ ದರಗಳಲ್ಲಿ ಯಾವುದೇ ಏರಿಕೆ ಕಂಡುಬಂದಿಲ್ಲ.

ಮೂಲಗಳನ್ನು ಉಲ್ಲೇಖಿಸಿ, ಎಎನ್ಐ ವರದಿ ಮಾಡಿದ್ದು, ಇಂದಿನಿಂದ 19 ಕೆಜಿ ವಾಣಿಜ್ಯ ಸಿಲಿಂಡರ್‌ನ ಬೆಲೆಯನ್ನು 993 ರೂ. ಹೆಚ್ಚಿಸಲಾಗಿದೆ. ಗೃಹಬಳಕೆ ಗ್ಯಾಸ್ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ತಿಳಿಸಿದೆ.

ಫೆಬ್ರವರಿ 28ರಂದು ಸಂಘರ್ಷ ಭುಗಿಲೆದ್ದ ನಂತರ ಈಗ ಮೂರನೇ ಬಾರಿಗೆ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು ಹೆಚ್ಚಳವಾಗಿದೆ. ಮಾರ್ಚ್ 1ರಂದು 144 ರೂ.ಗಳಷ್ಟು ಏರಿಕೆ

3ನೇ ಪುಟ.....

ಯಾಪಲದಿನ್ನಿ: ಕಲಬೆರಕೆ ಸೇಂಧಿ ಮಾರಾಟ ಇಬ್ಬರು ಬಂಧನ



ರಾಯಚೂರು,ಮೇ.01-

ವಿಷಪೂರಿತ ಸಿ ಎಚ್ ಪೌಡರ್ ಮಿಶ್ರಿತ ಕಲಬೆರಿಕೆ ಸೇಂದಿ ಮಾರಾಟ ಮಾಡುತ್ತಿದ್ದ ಇಬ್ಬರ ವ್ಯಕ್ತಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒದಗಿಸಿದ ಘಟನೆ ಯಾಪಲದಿನ್ನಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ನಡೆದಿದೆ.ಯಾಪಲದಿನ್ನಿ ಪೊಲೀಸ್ ಠಾಣಾ ವ್ಯಾಪ್ತಿಯಚಿಕೊರ್ತಕುಂದ ಗ್ರಾಮದಲ್ಲಿ ನೀಲವಮ್ಮ ಗಂಡ ದಿ ಮಲ್ಲಕೋಳಿ ಅಂಜಿನಪ್ಪ, ಸಾ-ಕೊರ್ತಕುಂದ, ವೆಂಕಟೇಶ ತಂದೆ ಮಾರೆಪ್ಪ 53ವರ್ಷ, ಜಾ- ಈಳಿಗೇರ ಸಾ- ಮಾಮಡದೊಡ್ಡಿ ಇವರಿಬ್ಬರು ಸೇರಿ ನೀಲಮ್ಮಳ ಮನೆಯ ಮುಂದಿನ ಸಾರ್ವಜನಿಕ ಸ್ಥಳದಲ್ಲಿ ಸಾರ್ವಜನಿಕ ರಸ್ತೆಯಲ್ಲಿ ಮಾನವ ಸೇವೆ ಯೋಗ್ಯವಲ್ಲದ ವಿಷಪೂರಿತ ಸಿ ಎಚ್ ಪೌಡರ್ ಕಲಬೆರಿಕೆ ಸೇಂದಿ ಮಾರುತಿದ್ದ ಮಾಹಿತಿ ಮೇರೆಗೆ ಯಾಪಲದಿನ್ನಿ ಪೊಲೀಸರು ಅದಾಳಿ ನಡೆಸಿದ್ದರು.ಅಲ್ಲದೆ ಮಾನವನು ಕುಡಿಯಲು

3ನೇ ಪುಟ.....

ಮಹಾನಗರ ಪಾಲಿಕೆಗೆ 3 ತಿಂಗಳೊಳಗೆ ಚುನಾವಣೆ ನಡೆಸಲು ಹೈಕೋರ್ಟ್ ನಿರ್ದೇಶನ



ರಾಯಚೂರು,ಮೇ.01-

ಮಹಾನಗರ ಪಾಲಿಕೆಗೆ ಮುಂದಿನ ಮೂರು ತಿಂಗಳೊಳಗೆ ಚುನಾವಣೆ ನಡೆಸಲು ಕರ್ನಾಟಕ ಹೈಕೋರ್ಟ್ ಕಲಬುರಗಿ ಪೀಠ ಆದೇಶ ನೀಡಿ ತೀರ್ಪು ಪ್ರಕಟಿಸಿದೆ.

ಮುಂದಿನ ಚುನಾವಣೆ ನಡೆಯುವವರೆಗೆ ನಗರಸಭೆ ಸದಸ್ಯರ ಅಧಿಕಾರಾವ'ಧಿಯನ'್ನ ಮುಂದುವರಿಸಬೇಕು ಎಂದು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ತಿರಸ್ಕರಿಸಿದ್ದ ಏಕಸದಸ್ಯ ಪೀಠದ ತೀರ್ಪನ್ನು ಹೈಕೋರ್ಟ್ ಕಲಬುರಗಿ ಪೀಠ ಎತ್ತಿಹಿಡಿದಿದ್ದು, ಎ. 28ರಂದು ಈ ತೀರ್ಪು ಪ್ರಕಟಿಸಿದೆ.

ನ. 01, 2025ಕ್ಕೆ ನಗರಸಭೆ ಸದಸ್ಯರ ಅಧಿಕಾರಾವಧಿ ಮುಗಿದಿದೆ. ಮತ್ತೆ ಚುನಾವಣೆ ನಡೆಯುವವರೆಗೆ ಅಧಿಕಾರಾವಧಿಯನ್ನು ಮುಂದುವರಿಸುವುದು ಸೆಕ್ಷನ್ 243 ಕಾನೂನಿನ ಉಲ್ಲಂಘನೆಯಾಗುತ್ತದೆ. ಹೀಗಾಗಿ ಮುಂದಿನ ಮೂರು ತಿಂಗಳಲ್ಲಿ ರಾಯಚೂರು ಮಹಾನಗರ ಪಾಲಿಕೆಗೆ ಚುನಾವಣೆ ನಡೆಸಲು ಕರ್ನಾಟಕ ರಾಜ್ಯ ಚುನಾವಣಾ ಆಯೋಗಕ್ಕೆ ಕಲಬುರಗಿ ಹೈಕೋರ್ಟ್ ಸ್ಪಷ್ಟ ನಿರ್ದೇಶನ ನೀಡಿದೆ. ಜಸ್ಟಿಸ್ ಸೂರಜ್ ಗೋವಿಂದರಾಜ್ ಹಾಗೂ ಡಾ. ಜಸ್ಟಿಸ್ ಚಿಲಕೂರ್ ಸುಮಲತಾ ಅವರು ತೀರ್ಪು ನೀಡಿದ್ದಾರೆ.

2018ರಲ್ಲಿ ನಗರಸಭೆ ಸದಸ್ಯರಾಗಿ ಆಯ್ಕೆಯಾಗಿದ್ದವರು 2020ರಲ್ಲಿ ಪ್ರಥಮ ಸಭೆ ನಡೆಸಿದ್ದರು. 2023-24ರಲ್ಲಿ ಅಧ್ಯಕ್ಷೀಯ ಮೀಸಲಾತಿ ವಿವಾದ ಕೋರ್ಟ್ ಮೆಟ್ಟಿಲೇರಿದ ಕಾರಣ 5 ತಿಂಗಳ ಕಾಲ ಆಡಳಿತಾಧಿಕಾರಿಯನ್ನು ನೇಮಿಸಲಾಗಿತ್ತು. ಅದರ ನಂತರ ಕರ್ನಾಟಕ ರಾಜ್ಯ ಚುನಾವಣಾ ಆಯೋಗವು ನಗರಸಭೆ ಚುನಾಯಿತ ಪ್ರತಿನಿಧಿಗಳ ಅಧಿಕಾರಾವಧಿ 01-11-2025ಕ್ಕೆ ಪೂರ್ಣಗೊಂಡಿದೆ ಎಂದು ಸೂಚಿಸಿತ್ತು.

ಇದನ್ನು ಪ್ರಶ್ನಿಸಿದ 23 ಸದಸ್ಯರು ಕರ್ನಾಟಕ ಮುನ್ಸಿಪಲ್ ಕಾಯ್ದೆ 503ನೇ ಕಲಂ ಅಡಿಯಲ್ಲಿ 15 ತಿಂಗಳ ಆಡಳಿತಾಧಿಕಾರಿಗಳ ಅವಧಿಯನ್ನು ಹೊರಗಿಡಬೇಕು ಎಂದು ಹೈಕೋರ್ಟ್ ಕಲಬುರಗಿ ಪೀಠದಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. ಏಕಸದಸ್ಯ ಪೀಠವು ಅವರ ಮೇಲ್ಮನವಿಯನ್ನು ಫೆಬ್ರವರಿ 26, 2026ರಂದು ತಿರಸ್ಕರಿಸಿತ್ತು. ಇದೀಗ ಅಂತಿಮವಾಗಿ ಎಲ್ಲಕ್ಕೂ ತೆರೆಬಿದ್ದಿದ್ದು, ಮುಂದಿನ ಮೂರು ತಿಂಗಳೊಳಗೆ ಚುನಾವಣೆ ನಡೆಸಲು ಹೈಕೋರ್ಟ್ ಕಲಬುರಗಿ ಪೀಠ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಿದೆ.

ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ

ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ



ರಾಯಚೂರು,ಮೇ.01-

ಯಾವುದೇ ಕಾಯಿಲೆಯಾಗಿರಲಿ ಅದನ್ನು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸುವುದು ಮುಖ್ಯವಾಗಿದೆ. ಮೊಬೈಲ್‌ನಲ್ಲಿ ಎಚ್‌ಐವಿ ಸ್ಥಿತಿಗತಿಯನ್ನು ಪರಿಶೀಲನೆಗೆ ಒಳಪಡಿಸಿಕೊಳ್ಳ ಮೂಲಕ ಜಿಲ್ಲೆಯಲ್ಲಿ ಮಿಷನ್ ಏಡ್ಸ್ ಸುರಕ್ಷಾ ಅಭಿಯಾನವನ್ನು ಪರಿ ಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕೆಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಏಪ್ರಿಲ್ 29ರ ಬುಧವಾರದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಅಭಿಯಾನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರವು ಸಮುದಾಯದ ಆರೋಗ್ಯ ಸಂರಕ್ಷಣೆಗೆ ಮತ್ತು ಸಮಾಜದ ಯುವ ಜನತೆಯ ಆರೋಗ್ಯ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿ ಹೆಚ್‌ಐವಿ ಸೋಂಕನ್ನು ಆರಂಭದಲ್ಲಿಯೇ ಗುರ್ತಿಸಲು ಸರಳವಿಧಾನವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ವೈಯಕ್ತಿಕ ಸ್ಥಿತಿ ತಿಳಿಯಲು ಜಿಲ್ಲೆಯಾದ್ಯಂತ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದರು.

ಈಗಾಗಲೆ ವೈದ್ಯರು, ಸಿಬ್ಬಂದಿಯರು ಅಭಿಯಾನವನ್ನು ಯಶಸ್ವಿಯಾಗಿ ಕೈಗೊಂಡಿದ್ದು ,ಸಂತಸದಾಯಕವಾಗಿದೆ. ಆದರೂ ಸಹ ಗೌಪ್ಯತೆಯೊಂದಿಗೆ ಸ್ವಯಂ ಪರೀಕ್ಷೆ ಮಾಡಿಕೊಳ್ಳಲು ಸಹಾಯಕವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಪ್ರಶ್ನೋತ್ತರದಲ್ಲಿ ಸ್ವಯಂ ಉತ್ತರಗಳಿಂದ, ಸೋಂಕು ಹರಡಬಹುದಾದ ಸಾಧ್ಯತೆಗಳಿದ್ದಲ್ಲಿ ಕನಿಷ್ಟ ಶೇಖಡಾ 95 ರಷ್ಟು ಜನ ತಪಾಸಣೆ ಮಾಡಿಸಿಕೊಳ್ಳಲು, ಖಚಿತಪಟ್ಟ ಸೋಂಕಿತರಲ್ಲಿ ಶೇ.95 ರಷ್ಟು ಜನರನ್ನು ಎಆರ್‌ಟಿ ಕೇಂದ್ರ ಗಳಿಗೆ ಚಿಕಿತ್ಸೆ ಗೆ ಬರುವಂತೆ ಮಾಡಲು ಹಾಗೂ ಸೋಂಕಿತರಾಗಿ ಎಆರ್‌ಟಿ ಚಿಕಿತ್ಸೆ ಪಡೆಯುವವರಲ್ಲಿ ಶೇ.95 ರಷ್ಟು ಜನರನ್ನು ಸದಾ ನಿಗಾವಣೆ, ಆಪ್ತ ಸಮಾಲೋಚನೆ, ಜಾಗೃತಿ ಮೂಲಕ ಚಿಕಿತ್ಸೆ ಬಿಡದಂತೆ, ವೈರಲ್ ಲೋಡ್ ಹೆಚ್ಚಾಗದಂತೆ ಹಾಗೂ ಹೈರಿಸ್ಕಲ್ಲಿ ಇರುವ ಜನತೆಗೆ ಮೂಲ ಉದ್ದೇಶ ತಲುಪಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ರಕ್ತದಾನ ಶಿಬಿರಗಳ ಆಯೋಜನೆಗೆ ಸೂಚನೆ: ರಾಯಚೂರು ಮತ್ತು ಸಿಂಧನೂರುನಲ್ಲಿರುವ ಬ್ಲಡ್ ಬ್ಯಾಂಕ್‌ಗಳನ್ನು ಪ್ರತಿ ತಿಂಗಳು ಶಿಬಿರ

3ನೇ ಪುಟ.....



ಬ್ಲೂ ಆರ್ಮಿಯಿಂದ ಬುದ್ಧ ಪೂರ್ಣಿಮಾ ಆಚರಣೆ

ರಾಯಚೂರು,ಮೇ.01-

ಬ್ಲೂ ಆರ್ಮಿ ದೇವಿನಗರ ಹಾಗೂ ನೀಲಕಂಠೇಶ್ವರ ದೇವಸ್ಥಾನ ಸಮಿತಿ ಇವರ ವತಿಯಿಂದ 2569ನೇ ಬುದ್ಧ ಪೂರ್ಣಿಮಾ ಆಚರಣೆ ಕಾರ್ಯಕ್ರಮವು ತ್ರಿಸರಣ ಪಂಚಶೀಲದೊಂದಿಗೆ ಪ್ರಾರಂಭಗೊಂಡಿದ್ದು. ಈ ಕಾರ್ಯಕ್ರಮದಲ್ಲಿ ಗೋವಿಂದ ರಾಜು ಉಪನ್ಯಾಸಕರು ಬುದ್ಧರ ನೈಜ ಇತಿಹಾಸದ ಬಗ್ಗೆ ವಿವರಿಸಿದರು, ಕಾರ್ಯಕ್ರಮ ಉದ್ದೇಶಿಸಿ ನೀಲಕಂಠೇಶ್ವರ ದೇವಸ್ಥಾನ ಸಮಿತಿಯ ಸಂಘಟಕರು ಬಸವರಾಜ್ ಪಡಶೆಟ್ಟಿಯವರು ದುಃಖದ ಮೂಲ ಕುರಿತು ಮಾತನಾಡಿದರು. ಅದೇ ರೀತಿ ದೇವಿ ನಗರದ ಯುವ ಮುಖಂಡರಾದ ಆಯುಷ್ಮಾನ್ ಚಂದ್ರಶೇಖರ್ ಅವರು ಧಮ್ಮ ಹಾಗೂ ಪಂಚಶೀಲಗಳ ವಿವರಣೆಯನ್ನು ನೀಡಿ, ಬುದ್ಧರು ಪ್ರಪಂಚಕ್ಕೆ ಸಾರಿದಂತಹ ಮೈತ್ರಿ ಮತ್ತು ಶಾಂತಿಯ ಕುರಿತು ಸಂಕ್ಷಿಪ್ತವಾಗಿ ವಿವರಿಸಿದರು.

ಈ ಸಂದರ್ಭದಲ್ಲಿ ನೀಲಕಂಠೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷರು ಮಹಾಂತೇಶ್ ಚಾಗಲ್, ಸದಸ್ಯರಾದ ರವೀಂದ್ರ ರೆಡ್ಡಿ, ಬಡಾವಣೆಯ ಮುಖಂಡರಾದ ಶರಣಬಸವ ರೆಡ್ಡಿ, ಎ ರಾಮು, ಸುರೇಶ್, ಪರಿಶಪ್ಪ, ಸತ್ಯರಾಜು, ಗೋಪಾಲ್, ಪರಶುರಾವ್, ಅನಂತಶಯನ,ಶ್ರೀಕಾಂತ್, ರಾಜು,ಆಂಜನೇಯ,ವಿಜಯ್ ಅನೇಕ ಯುವಕರು ಭಾಗಿಯಾಗಿದ್ದರು.

ಜಿಲ್ಲಾಡಳಿತದಿಂದ ಭಗವಾನ್ ಬದ್ಧರ 2570ನೇ ಜಯಂತಿ ಆಚರಣೆ

ಬುದ್ಧರ ಆದರ್ಶ, ತತ್ವಗಳನ್ನು ಅನುಸರಿಸಿ: ಸಹಾಯಕ ಆಯುಕ್ತ. ಡಾ.ಹಂಪಣ್ಣ ಸಜ್ಜನ

ರಾಯಚೂರು ಮೇ.01-

ಭಗವಾನ್ ಬುದ್ಧರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದ ಆದರ್ಶ ಹಾಗೂ ತತ್ವಗಳನ್ನು ನಾವು ಅನುಸರಿಸಬೇಕು, ಅವರ ವಿಚಾರಗಳನ್ನು ನಮ್ಮ ದಿನನಿತ್ಯ ಜೀವನದಲ್ಲಿ ಪಾಲಿಸಬೇಕೆಂದು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್ ಹೇಳಿದರು.



ಅವರು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಗವಾನ್ ಬದ್ಧರ 2570ನೇ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಗವಾನ್ ಬುದ್ಧರು ಶಾಂತಿ, ಪ್ರೀತಿ ಹಾಗೂ ಸೌಹಾರ್ದತೆಯ ಸಂದೇಶಗಳನ್ನು ನಮ್ಮ ಯುವ ಪೀಳಿಗೆಯವರು ಪಾಲಿಸುವಂತಾಗಬೇಕು. ಬುದ್ಧನ ಪ್ರಮುಖ ಬೋಧನೆಗಳಲ್ಲಿ ಸಕಲ ಜೀವಿಗಳಿಗೂ ಸಹಾನುಭೂತಿ ತೋರಿಸುವದಾಗಿದೆ. ಸಾಮಾನ್ಯ ಜನರ ಜೊತೆಗೆ ಅವರು ಜೀವನ ನಡೆಸಿದರು ಎಂದರು.

ಭಗವಾನ್ ಬುದ್ಧರು ತಮ್ಮ ತತ್ವ ಮತ್ತು ಸಿದ್ಧಾಂತಗಳ ಬಗ್ಗೆ ಜಾಗೃತಿ ಮೂಡಿಸಿದ ಮಹಾನ್ ವ್ಯಕ್ತಿಯಾಗಿದ್ದು, ಅವರ ಜ್ಞಾನಮಾರ್ಗ ಅನುಸರಿಸಿ ನಮ್ಮೊಳಗೆ ಜಾಗೃತಿ ಮೂಡಿಸಿಕೊಂಡು ಸಮಾಜವನ್ನು ಸುಧಾರಣೆ ಮಾಡುವಲ್ಲಿ ನಾವೆಲ್ಲರು ಶ್ರಮಿಸಬೇಕು ಎಂದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಮನುಷ್ಯನಿಗೂ ಸಾವಿದೆ ಎಂದು ತಿಳಿದವನ್ನು ಯಾರಿಗೂ ತೊಂದರೆ ಕೊಡುವುದಿಲ್ಲ. ಬೇರೆ ಅವರಿಗೆ ತೊಂದರೆ ಕೊಡದೆ ಕೊಡದಿದ್ದರೆ. ಶಾಂತಿ ತನ್ನಷ್ಟಕ್ಕೆ ತಾನೆ ನೆಲೆಸುತ್ತದೆ. ಎಲ್ಲರೂ ಒಂದಾಗಿ ಹೋಗಬೇಕು. ಜೀವನದಲ್ಲಿ ಶಾಂತಿ ಬೇಕಾದರೆ ಗೌತಮ ಬುದ್ಧರ ಅಷ್ಟಾಂಗ ಮಾರ್ಗವನ್ನು ಅನುಸರಿಸಬೇಕು ಎಂದರು.


ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ ಸತ್ಯಂಪೇಟೆ ಅವರು ಮಾತನಾಡಿ, ಜಗತ್ತು ಕಂಡಿರುವ ಚೇತನಗಳಲ್ಲಿ ಗೌತಮ ಬುದ್ಧರು ಒಬ್ಬರು. ಮೂಲತ: ರಾಜ ಮನೆತನದಲ್ಲಿ

3ನೇ ಪುಟ.....

ನನ್ನ ವಿರುದ್ಧ ಪತಿ ನೀಡಿರುವ ಹೇಳಿಕೆ ಸಂಪೂರ್ಣ ಸುಳ್ಳು-ಮೆಹರುನ್ನಿಸಾ ಬೇಗಂ

ರಾಯಚೂರು, ಮೆ.1-

ನನ್ನ ಪತಿ ಇಫ್ತೇಖರುದ್ದೀನ್ ಅಲಿಯಾಸ್ ಮದನಿ ನನ್ನ ವಿರುದ್ಧ ನೀಡಿರುವ ಹೇಳಿಕೆ ಸಂಪೂರ್ಣ ಸುಳ್ಳು, ಕಲ್ಪಿತ ಮತ್ತು ದುರುದ್ದೇಶಪೂರಿತವಾಗಿವೆ ಎಂದು ಮೆಹರುನ್ನಿಸಾ ಬೇಗಂ ಹೇಳಿದರು.



ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ,

ಇದು ಕೇವಲ ವೈಯಕ್ತಿಕ ದಾಳಿ ಅಲ್ಲ, ಒಬ್ಬ ಮಹಿಳೆಯ ಗೌರವ, ಸ್ವಾಭಿಮಾನ ಮತ್ತು ಜೀವನದ ಮೇಲೆ ನಡೆಸಿದ ಸಾರ್ವಜನಿಕ ಹಲ್ಲೆ ಎಂದು ಆರೋಪಿಸಿದರು.ನನ್ನ ಗಂಡ ಹಾಗೂ ಅವರ ಸಂಬಂದಿಕರಿಂದ ನಿರಂತರ ಕಿರುಕುಳ ಮತ್ತು ಹಿಂಸೆ, ನಮ್ಮ ಮದುವೆಯಾದ ದಿನದಿಂದಲೇ ನನಗೆ, ಮಾನಸಿಕ ಹಿಂಸೆ, ಅನುಮಾನ, ಅವಮಾನ, ಖುಲಾ ನೀಡಲು ಒತ್ತಾಡ ಹಾಕಿ ಮರುಮದುವೆಗೆ ಬಲವಂತ ಮಾಡುತ್ತಿದ್ದಾನೆಂದು ಆರೋಪಿಸಿದರು.

.ನನ್ನ ವಿರುದ್ಧ ಸುಳ್ಳು ಕಥೆಗಳನ್ನು ಸೃಷ್ಟಿಸಿ, ಸಾಮಾಜಿಕ ಜಾಲತಾಣಗಳಲ್ಲಿ ಹಬ್ಬಿಸುವುದು ಒಂದು ಸಂಘಟಿತ ದಾಳಿ ಆಗಿರುತ್ತದೆ.ದಿ. 6 ಏಪ್ರಿಲ್ 2026, ಅ ದಿನ ನಾನು ಮಕ್ಕಳೊಂದಿಗೆ ಮನೆಯಲ್ಲಿ ಒಬ್ಬೇ ಇದ್ದಾಗ, ಕೂಲರ್‌ನಿಂದ ವಿದ್ಯುತ್ ಸೋರಿಕೆ ಉಂಟಾಗಿ ಜೀವಕ್ಕೆ ಅಪಾಯವಾಯಿತು.ನನ್ನ ಪತಿಗೆ ಕರೆ ಮಾಡಿದರೂ ಸ್ಪಂದನೆ ಇರಲಿಲ್ಲ, ಸಂಕಷ್ಟದ ಸಂದರ್ಭದಲ್ಲಿ ಸಯ್ಯದ್ ದಾನಿಶ್ ಅವರು ಮಾನವೀಯತೆಯಿಂದ ಸಹಾಯ ಮಾಡಿದ್ದಾರೆ

ಆದರೆ ಅದನ್ನೇ ದುರುಪಯೋಗ ಮಾಡಿಕೊಂಡು, ನನ್ನ ಪತಿ ನನ್ನ ಅನುಮತಿಯಿಲ್ಲದೆ ವಿಡಿಯೋ ಚಿತ್ರೀಕರಣ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿ ನನ್ನ ಘನತೆಯನ್ನು ಹಾಳುಮಾಡುವ ಹೀನ ಕೃತ್ಯ ಮಾಡಿದ್ದಾರೆಂದು ದೂರಿದರು.

ಎಸ್‌ಡಿಪಿಐ ಕಾರ್ಯಕರ್ತ ಮೊಹಮ್ಮದ್ ಶಾಫಿ ಅವರು ಕೂಡ ನನಗೆ ನನ್ನ ಸ್ವಂತ ಅಣ್ಣನಾಗಿ ನನಗೆ ಸಹಾಯ ಸಹಕಾರ ಮಾಡುತ್ತಿದ್ದಾರೆ. ಅವರ ಮತ್ತು ದಾನಿಶ್ ಸಹಾಯ ದಿಂದ ದಿ.21ರಂದು ಮಹಿಳಾ ಪೊಲೀಸ್ ಠಾಣೆಯಲ್ಲಿ

ನನ್ನ ಪತಿ ಹಾಗೂ ಅವರ ಕುಟುಂಬದ ವಿರುದ್ಧ ದೂರು ದಾಖಲಿಸಿದ್ದೇನೆ.

ನನಗೆ ತಂದೆ ತಾಯಿಯ ಬೆಂಬಲವಿಲ್ಲ.ಸಾರ್ವಜನಿಕ ಹಿಂಸೆ ನಾನು ಇಬ್ಬರು ಮಕ್ಕಳನ್ನು ಒಬ್ಬಳೇ ಸಾಕುತ್ತಿದ್ದೇನೆ, ನನ್ನ ಮೇಲೆ ನಡೆಯುತ್ತಿರುವ ಈ ಮಾನಸಿಕ, ಸಾಮಾಜಿಕ ಮತ್ತು ಸಾರ್ವಜನಿಕ ಹಿಂಸೆ ನನ್ನ ಬದುಕನ್ನೇ ಕತ್ತಲೆಗೆ ತಳ್ಳುತ್ತಿದೆ ಎಂದರು.

ಪೊಲೀಸ್ ಇಲಾಖೆ ಎಫ್ ಐ ಆರ್ ಉಲ್ಲೇಖಿಸಿರುವ ಆರೋಪಿಗಳನ್ನು ತಕ್ಷಣ ಬಂಧಿಸಬೇಕು, ನನಗೆ ಮತ್ತು ನನ್ನ ಮಕ್ಕಳಿಗೆ ತಕ್ಷಣ ರಕ್ಷಣೆ ಒದಗಿಸಬೇಕು, ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ

ಬೀದರ್ ಮಾದರಿಯಲ್ಲಿ ಕೊಪ್ಪಳ ಜಿಲ್ಲೆಯಲ್ಲೂ ಕಾರ್ಮಿಕ ಸಹಕಾರ ಸಂಘ ಸ್ಥಾಪನೆಗೆ ಸಿದ್ಧತೆ

ಕೊಪ್ಪಳ ,ಮೇ.01-

ಹೊರಗುತ್ತಿಗೆ ನೌಕರರಿಗಾಗಿ ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚನೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕೊಪ್ಪಳ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚಿಸುವ ಬಗ್ಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ವಿವಿಧ ಇಲಾಖೆಗಳು ಮತ್ತು ಇಲಾಖೆಗಳ ಅಧೀನದಲ್ಲಿ ಬರುವ ನಿಗಮ ಮಂಡಳಿ ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರಿಗೆ ಸಂಬಂಧಿಸಿದಂತೆ, ಕೊಪ್ಪಳ ಜಿಲ್ಲೆಯಲ್ಲೂ ಸಹ ಬೀದರ್ ಮಾದರಿಯಲ್ಲಿ ಸಂಘವನ್ನು ಸ್ಥಾಪಿಸಿ, ಈ ಸಂಘದ ಮೂಲಕ ಹೊರಗುತ್ತಿಗೆ ನೌಕರರನ್ನು ವಿವಿಧ ಇಲಾಖೆಗಳಿಗೆ ನಿಯೋಜಿಸಿದ್ದಲ್ಲಿ ಹೊರಗುತ್ತಿಗೆ ನೌಕರರ ವೇತನ ಪಾವತಿ ಹಾಗೂ ಶಾಸನಾತ್ಮಕವಾಗಿ ನೀಡಬೇಕಾದ ಸೌಲಭ್ಯಗಳ ಕುರಿತಾದ ಸಮಸ್ಯೆಯನ್ನು ಪರಿಹರಿಸಲು ಅನುಕೂಲವಾಗಲಿದೆ ಎಂದರು.

ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚಿಸಿ, ಅದರಲ್ಲಿ ಒಂದು ಸಾವಿರ ಹೊರಗುತ್ತಿಗೆ ನೌಕರರನ್ನು ನೋಂದಾಯಿಸಲು ಅವಕಾಶವಿದ್ದು, ಈ ಬಗ್ಗೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಮುಖ್ಯಸ್ಥರಿಗೆ ಕಾರ್ಮಿಕ ಇಲಾಖೆಯಿಂದ ಸೂಕ್ತ ಮಾಹಿತಿ ನೀಡುವಂತಾಗಬೇಕು. ಈ ಸಭೆಯ ನಡಾವಳಿ ಮತ್ತು ಸರ್ಕಾರದ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ ಎಲ್ಲಾ ಅಧಿಕಾರಿಗಳನ್ನೊಳಗೊಂಡು ಕೊಪ್ಪಳ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚಿಸಲು ಬೈಲಾ ಸಿದ್ದಪಡಿಸಿ ಮುಂದಿನ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಕಾರ್ಮಿಕ ಇಲಾಖೆ ಮತ್ತು ಸಹಕಾರಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.


ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ಸ್ಥಾಪನೆಗೆ ಮಾತ್ರ ಪ್ರಸ್ತುತ ಅವಕಾಶವಿದ್ದು, ಉಳಿದಂತೆ ನ್ಯಾಯಾಲಯಗಳಲ್ಲಿ ವಿವಿಧ ಸಂಸ್ಥೆ ಹಾಗೂ ಸಂಘಟನೆಗಳಿಂದ ರಿಟ್ ಪಿಟೀಷನಗಳು ದಾಖಲಾಗಿರುವುದರಿಂದ ಈ ಪ್ರಕರಣಗಳ ತೀರ್ಪಿನ್ನು ಆಧರಿಸಿ ಸಹಕಾರ ಸಂಘದ ಕಾರ್ಯ ಚಟುವಟಿಕೆ ಮುಂದುವರೆಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಲ್ಲಾ ಅಧಿಕಾರಿಗಳಿಗೆ ಮತ್ತು ಕಾರ್ಮಿಕರ ಪ್ರತಿನಿಧಿಗಳಿಗೆ ಸ್ಪಷ್ಟಪಡಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತವನ್ನು ರಚಿಸಲು ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ತಮ್ಮ ಇಲಾಖೆವಾರು ಹಾಗೂ ಅಧೀನ ನಿಗಮ ಮಂಡಳಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಹೊರಗುತ್ತಿಗೆ ಕಾರ್ಮಿಕರ ವಿವರ ಹಾಗೂ ಏಜನ್ಸಿ ಮತ್ತು ಟೆಂಡರ್ ಅವಧಿಯ ಸರಿಯಾಗಿ ಮಾಹಿತಿ ನೀಡಬೇಕೆಂದು ಇಲಾಖಾ ಮುಖ್ಯಸ್ಥರಿಗೆ ಸೂಚನೆ ನೀಡಿದರು.

ಕೊಪ್ಪಳ ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಸುಧಾ ಗರಗ ಅವರು ಮಾತನಾಡಿ, ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ಸಂಘಕ್ಕೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಡಳಿತ ಮಂಡಳಿ ಇರಲಿದ್ದು, ಕಾರ್ಯದರ್ಶಿಗಳಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಬಾಲಕಾರ್ಮಿಕ ಯೋಜನಾ ಸೋಸೈಟಿಯ ನಿರ್ದೇಶಕರು ಮತ್ತು ಯೋಜನಾ ನಿರ್ದೇಶಕರು ಹಾಗೂ ಐದು ಜನ ಚುನಾಯಿತ ಸದಸ್ಯರು ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತಕ್ಕೆ ನಿರ್ದೇಶಕರಾಗುತ್ತಾರೆ. ಎಲ್ಲಾ ಕಾರ್ಮಿಕರು ಸದಸ್ಯರಾಗಿರುತ್ತಾರೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೋಸೈಟಿಯ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ ಅವರು, ಸಹಕಾರ ಸಂಘ ರಚನೆಯ ಉದ್ದೇಶ, ಸರ್ಕಾರದ ನೀಡಿದ ನಿರ್ದೇಶನಗಳ ಕುರಿತು ಮತ್ತು ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳ ಕುರಿತು ಸಭೆಗೆ ತಿಳಿಸಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪರಶುರಾಮ್ ಶೆಟ್ಟೆಪ್ಪನವರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಟಿ.ಲಿಂಗರಾಜು, ಡಾ. ಬಿ.ಆರ್ ಅಂಬೇಡ್ಕರ್ ನಿಗಮದ ವ್ಯವಸ್ಥಾಕರಾದ ಪುಷ್ಪಲತಾ, ಕೊಪ್ಪಳ ವೃತ್ತದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ ವಿಶ್ವನಾಥ, ಗಂಗಾವತಿ ವೃತ್ತದ ಕಾರ್ಮಿಕ ನಿರೀಕ್ಷಕರಾದ ಅಶೋಕ ಮಣಿಗಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಹೊರಗುತ್ತಿಗೆ ಕಾರ್ಮಿಕರ ಪ್ರತಿನಿಧಿಗಳು ಉಪಸ್ಥಿತರಿದ್ದರು.



ಕಲಬುರಗಿ ನಗರದಲ್ಲಿ ಸ್ಮಾರ್ಟ್ ಟ್ರಾಫಿಕ್ ವ್ಯವಸ್ಥೆ ಜಾರಿ: ನಿಯಮ ಉಲ್ಲಂಘನೆ ಮಾಡಿದರೆ ಸ್ವಯಂಚಾಲಿತ ದಂಡ

ಕಲಬುರಗಿ,ಮೇ.01-

ನಗರದಲ್ಲಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸುವ ವಾಹನ ಸವಾರರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ನಗರ ಪೊಲೀಸ್ ಆಯುಕ್ತಾಲಯ ಮುಂದಾಗಿದೆ. ಅತ್ಯಾಧುನಿಕ ಕೃತಕ ಬುದ್ಧಿಮತ್ತೆ () ಆಧಾರಿತ ಇಂಟೆಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಮ್ () ಜಾರಿಗೆ ತರಲಾಗಿದ್ದು, ಸಂಚಾರಿ ಉಲ್ಲಂಘನೆಗಳನ್ನು ಸ್ವಯಂಚಾಲಿತವಾಗಿ ಪತ್ತೆಹಚ್ಚುವ ವ್ಯವಸ್ಥೆ ಸಿದ್ಧವಾಗಿದೆ. ನಗರದ ಪ್ರಮುಖ 58 ಸ್ಥಳಗಳಲ್ಲಿ ಒಟ್ಟು 180 ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇದರಲ್ಲಿ 4 ವಿಶೇಷ ಆಧಾರಿತ ಕ್ಯಾಮೆರಾಗಳೂ ಸೇರಿವೆ. ಇವು ದಿನದ 24 ಗಂಟೆಗಳೂ ಕಾರ್ಯನಿರ್ವಹಿಸಿ, ರಾತ್ರಿ ವೇಳೆಯಲ್ಲಿಯೂ ಸ್ಪಷ್ಟ ದೃಶ್ಯಗಳನ್ನು ಸೆರೆಹಿಡಿಯುವ ಸಾಮರ್ಥ್ಯ ಹೊಂದಿವೆ ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಢಗೆ ತಿಳಿಸಿದ್ದಾರೆ.

ನಿಯಮ ಉಲ್ಲಂಘನೆ ನಡೆದ ತಕ್ಷಣ ಸಂಬಂಧಿಸಿದ ವಾಹನ ಮಾಲೀಕರ ಮೊಬೈಲ್‌ಗೆ ಸಂದೇಶ ರವಾನೆಯಾಗಲಿದೆ. ಮಾನವ ಹಸ್ತಕ್ಷೇಪವಿಲ್ಲದೆ ಸ್ವಯಂಚಾಲಿತವಾಗಿ ಚಲನ್ (ದಂಡ ನೋಟಿಸ್) ಸೃಷ್ಟಿಯಾಗಲಿದೆ.

ಪಾದಚಾರಿಗಳ ಸುರಕ್ಷತೆಗೆ ವಿಶೇಷ ವ್ಯವಸ್ಥೆ : ಜೀಬ್ರಾ ಕ್ರಾಸಿಂಗ್ ಪ್ರದೇಶಗಳಲ್ಲಿ ಆಧಾರಿತ ದೃಷ್ಟಿ ವ್ಯವಸ್ಥೆ ಅಳವಡಿಸಲಾಗಿದೆ. ಪಾದಚಾರಿಗಳು ರಸ್ತೆ ದಾಟುವಾಗ 500ರಿಂದ 700 ಮೀಟರ್ ದೂರದಲ್ಲೇ ವಾಹನ ಸವಾರರಿಗೆ ಎಚ್ಚರಿಕೆ ನೀಡಲಾಗುತ್ತದೆ. ವೇಗವಾಗಿ ಬರುತ್ತಿರುವ ವಾಹನಗಳಿಗೆ ಎಲ್‌ಇಡಿ ಲೈಟ್ ಬ್ಲಿಂಕ್ ಹಾಗೂ ಸೈರನ್ ಮೂಲಕ ಸೂಚನೆ ಸಿಗಲಿದೆ.

ಅಪರಾಧಿಗಳ ಪತ್ತೆಗೆ ಮುಖ ಗುರುತಿಸುವಿಕೆ : ಮುಖ ಗುರುತಿಸುವಿಕೆ () ವ್ಯವಸ್ಥೆಯ ಮೂಲಕ ಅಪರಾಧಿಗಳನ್ನು ಸುಲಭವಾಗಿ ಪತ್ತೆಹಚ್ಚುವ ವ್ಯವಸ್ಥೆಯೂ ಜಾರಿಗೆ ಬರಲಿದೆ. ಅಪರಾಧಿಗಳ ಡೇಟಾಬೇಸ್‌ನೊಂದಿಗೆ ಹೊಂದಾಣಿಕೆ ಮಾಡಿ ಲೈವ್ ಕ್ಯಾಮೆರಾ ಫೀಡ್ ಮೂಲಕ ಶಂಕಿತರನ್ನು ಗುರುತಿಸಲಾಗುತ್ತದೆ. ಕಾಣೆಯಾದ ಮಕ್ಕಳು ಹಾಗೂ ಹಿರಿಯರನ್ನು ಪತ್ತೆಹಚ್ಚಲು ಸಹ ಇದು ನೆರವಾಗಲಿದೆ.

ಈ ನೂತನ ವ್ಯವಸ್ಥೆ ಮೇ 1ರಿಂದ ಜಾರಿಗೆ ಬರಲಿದ್ದು, ನಗರದಲ್ಲಿ ಸುರಕ್ಷತೆ ಹಾಗೂ ಸಂಚಾರ ವ್ಯವಸ್ಥೆ ಮತ್ತಷ್ಟು ಸುಧಾರಿಸಲು ಸಹಕಾರಿಯಾಗಲಿದೆ.

ನೀರಿನ ಕೊರತೆ ಇಲ್ಲ, ಸದ್ಬಳಕೆ ಮಾತ್ರವಾಗುತ್ತಿಲ್ಲ : ಶ್ರೀಮಂತ ಬಿರಾದಾರ



ಅಫಜಲಪುರ.ಮೇ.01-

ತಾಲೂಕಿನಲ್ಲಿ ನೀರಿನ ಸಂಪನ್ಮೂಲಕ್ಕೆ ಯಾವುದೇ ರೀತಿಯ ಕೊರತೆ ಇಲ್ಲ. ಆದರೆ ಅವುಗಳ ಸರಿಯಾದ ಸದ್ಬಳಕೆ ಮತ್ತು ಸಮರ್ಪಕ ಅನುಷ್ಠಾನವಾಗುತ್ತಿಲ್ಲ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷ ಶ್ರೀಮಂತ ಬಿರಾದಾರ ಹೇಳಿದರು.

ಪಟ್ಟಣದ ಅಂಬೇಡ್ಕರ್ ಆವರಣದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ಭೀಮಾ ನದಿಯ ಜೊತೆಗೆ ಅಮರ್ಜಾ, ಬೋರಿ, ಮಲ್ಲಾಬಾದ್ ಹತ್ತಿರದ ಹಳ್ಳಗಳು ಸೇರಿದಂತೆ ಅನೇಕ ನೀರಿನ ಮೂಲಗಳಿವೆ. ಆದರೆ ಅವುಗಳು ನಿರ್ಲಕ್ಷ್ಯದಿಂದ ನಾಶವಾಗುತ್ತಿರುವ ಹಿನ್ನೆಲೆಯಲ್ಲಿ ಪುನಶ್ಚೇತನಗೊಳಿಸಿ, ಹಳ್ಳಗಳಿಗೆ ಬ್ರಿಜ್ ಕಂ ಬ್ಯಾರೇಜ್ ನಿರ್ಮಿಸಬೇಕು ಎಂದು ಆಗ್ರಹಿಸಿದರು.

ರೇಣುಕಾ ಸಕ್ಕರೆ ಕಾರ್ಖಾನೆಯಿಂದ ಭೀಮಾ ನದಿಗೆ ಮಲಿನ ನೀರು ಬಿಡಲಾಗುತ್ತಿದ್ದು, ನದಿ ದಡದ ಗ್ರಾಮಗಳ ಜನರು, ಪ್ರಾಣಿ ಪಕ್ಷಿಗಳು ಹಾಗೂ ದನಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗುತ್ತಿದೆ. ತಾಲೂಕು ಆಡಳಿತ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತಾಲೂಕಿನಲ್ಲಿ ನಿರ್ಮಿಸಿರುವ ಘೂಳನೂರ ಬ್ರಿಜ್ ಕಂ ಬ್ಯಾರೇಜ್‌ಗೆ ತಕ್ಷಣ ಗೇಟ್ ಅಳವಡಿಸಿ ನೀರು ತಡೆಹಿಡಿಯಬೇಕು. ಅಲ್ಲದೆ, ತಾಲೂಕಿನ ಕೆರೆಗಳನ್ನು ಶುದ್ದೀಕರಿಸಿ ನೀರು ಸಂಗ್ರಹಕ್ಕೆ ವ್ಯವಸ್ಥೆ ಮಾಡಬೇಕು ಎಂದರು.

ರೈತರಿಗೆ ಅನುಕೂಲವಾಗುವಂತೆ ಭೀಮಾ ಏತ ನೀರಾವರಿ ಯೋಜನೆಯ ಕಾಲುವೆಗಳನ್ನು ಸ್ವಚ್ಛಗೊಳಿಸಿ, ಈ ವರ್ಷವೇ ನೀರು ಹರಿಸುವ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ರಮೇಶ್ ಪಾಟೀಲ, ಬಾಪುಗೌಡ, ಬಸವರಾಜ ಉಪಸ್ಥಿತರಿದ್ದರು.

ಸಂವಿಧಾನವೇ ದೇಶದ ಪ್ರತಿಯೊಬ್ಬ ನಾಗರಿಕನ ಶ್ರೀರಕ್ಷೆ: ಸಚಿವ ಡಾ.ಶರಣಪ್ರಕಾಶ್ ಪಾಟೀಲ್

ಸೇಡಂ,ಮೇ.01-

ದೇಶದ ಸಂವಿಧಾನವು ಕೇವಲ ಒಂದು ಪುಸ್ತಕವಲ್ಲ, ಅದು ಈ ನಾಡಿನ ಪ್ರತಿಯೊಬ್ಬ ಸಾಮಾನ್ಯ ನಾಗರಿಕನ ಬದುಕಿನ ಶ್ರೀರಕ್ಷೆಯಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಹೇಳಿದರು.

ನಗರದ ರೈಲು ನಿಲ್ದಾಣದ ಸಮೀಪದ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿ ಬಳಿ ಛಲವಾದಿ ಸಮಾಜದ ವತಿಯಿಂದ ಆಯೋಜಿಸಿದ್ದ ಅಂಬೇಡ್ಕರ್ ಹಬ್ಬ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಬಾಬಾಸಾಹೇಬ್ ಅಂಬೇಡ್ಕರ್ ಅವರು ಅತ್ಯಂತ ದೂರದೃಷ್ಟಿಯಿಂದ ಸಂವಿಧಾನ ರೂಪಿಸಿದ್ದು, ಶೋಷಿತರು ಹಾಗೂ ಸಾಮಾನ್ಯರು ಸಮಾನವಾಗಿ ಬದುಕುವ ವಾತಾವರಣ ನಿರ್ಮಿಸಿದ್ದಾರೆ. ಯಾರೊಬ್ಬರ ಕೈಯಲ್ಲೂ ಅತಿಯಾದ ಅಧಿಕಾರ ಕೇಂದ್ರೀಕೃತವಾಗಬಾರದು ಎಂಬ ಕಾರಣಕ್ಕೆ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗಗಳ ನಡುವೆ ಸಮತೋಲನ ವ್ಯವಸ್ಥೆ ಕಲ್ಪಿಸಿದ್ದಾರೆ ಎಂದು ಹೇಳಿದರು.

ಪಾಶ್ಚಿಮಾತ್ಯ ರಾಷ್ಟ್ರಗಳು ಮಹಿಳೆಯರಿಗೆ ಮತದಾನದ ಹಕ್ಕು ನೀಡಲು ನೂರಾರು ವರ್ಷ ತೆಗೆದುಕೊಂಡವು. ಆದರೆ ಭಾರತದಲ್ಲಿ ಸಂವಿಧಾನ ಜಾರಿಯಾದ ಮೊದಲ ದಿನವೇ ಮಹಿಳೆಯರು, ಕಾರ್ಮಿಕರು ಹಾಗೂ ಬಡವರಿಗೆ ಸಮಾನ ಮತದಾನದ ಹಕ್ಕು ನೀಡುವ ಮೂಲಕ ಅಂಬೇಡ್ಕರ್ ಮಹತ್ವದ ಕ್ರಾಂತಿ ಮಾಡಿದ್ದಾರೆ ಎಂದರು.

ಇಂದಿಗೂ ಕೆಲವು ಶಕ್ತಿಗಳು ಮನುಸ್ಮೃತಿಯನ್ನು ವೈಭವೀಕರಿಸಲು ಪ್ರಯತ್ನಿಸುತ್ತಿವೆ. ಅಂಬೇಡ್ಕರ್ ಹಾಗೂ ಬಸವಣ್ಣನವರ ತತ್ವಗಳನ್ನು ಅನುಸರಿಸುವವರು ಇಂತಹ ಶಕ್ತಿಗಳ ಬಗ್ಗೆ ಎಚ್ಚರಿಕೆಯಿಂದಿರಬೇಕು ಎಂದು ಹೇಳಿದರು.

ಮಾಜಿ ಶಾಸಕ ರಾಜಕುಮಾರ್ ಪಾಟೀಲ್ ತೇಲ್ಕೂರ್ ಮಾತನಾಡಿ, ಸಮಾಜ ಕಟ್ಟುವ ಕಾರ್ಯಕ್ಕೆ ಮಠಾಧೀಶರು ಮುಂದಾಗಬೇಕು. ಸಮಾನತೆಯೇ ಅತಿದೊಡ್ಡ ಕ್ರಾಂತಿ, ಅದನ್ನು ನೀಡಿದ್ದೇ ಅಂಬೇಡ್ಕರ್ ಸಂವಿಧಾನ. ರಾಜಕೀಯ ಪಕ್ಷಗಳು ಸಮಾಜಗಳ ನಡುವೆ ಜಗಳ ಹಚ್ಚದೆ ಸಂವಿಧಾನದ ಹಾದಿಯಲ್ಲಿ ನಡೆಯಬೇಕು ಎಂದರು.

ಯುವಕರು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದಾಗ ಮಾತ್ರ ಅಂಬೇಡ್ಕರ್ ಕನಸು ನನಸಾಗಲು ಸಾಧ್ಯ ಎಂದು ಹೇಳಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಉರಿಲಿಂಗ ಪೆದ್ದೀಶ್ವರ ಮಠದ ಶ್ರೀ ಜ್ಞಾನ ಪ್ರಕಾಶ ಸ್ವಾಮೀಜಿ ಆಶೀರ್ವಚನ ನೀಡಿ, ಜಾತಿಗಳ ನಡುವೆ ವಿಭಜನೆ ಆಗದಂತೆ ಎಲ್ಲರೂ ಒಗ್ಗಟ್ಟಾಗಿರಬೇಕು. ಆಗ ಮಾತ್ರ ಸಂವಿಧಾನ ಉಳಿಯಲು ಸಾಧ್ಯ. ಮತದಾನ ಮಾರಾಟವಾಗಬಾರದು. ಅಂಬೇಡ್ಕರ್ ಆಶಯದಂತೆ ಆಡಳಿತ ನಡೆಸುವವರಿಗೆ ಮಾತ್ರ ಮತ ಚಲಾಯಿಸಬೇಕು ಎಂದು ಕಿವಿಮಾತು ಹೇಳಿದರು.

ಸೇಡಂನಲ್ಲಿ ಶೀಘ್ರದಲ್ಲೇ ಅಂಬೇಡ್ಕರ್ ಹೈಟೆಕ್ ಗ್ರಂಥಾಲಯ ನಿರ್ಮಾಣವಾಗಬೇಕು ಎಂಬ ಬೇಡಿಕೆಯನ್ನು ಸಚಿವರು ಈಡೇರಿಸುವ ವಿಶ್ವಾಸವಿದೆ ಎಂದು ಅಭಿಪ್ರಾಯಪಟ್ಟರು.

ಅಂಬೇಡ್ಕರ್ ಜಯಂತಿ ಸಂದರ್ಭದಲ್ಲಿ ಕೇವಲ ಡಿಜೆ ಹಾಕಿ ಕುಣಿದು ಕುಪ್ಪಳಿಸುವುದೇ ಆಚರಣೆ ಅಲ್ಲ. ಅವರು ತೋರಿಸಿದ ಹಾದಿಯಲ್ಲಿ ನಡೆದಾಗ ಮಾತ್ರ ಅವರ ಕನಸು ನನಸಾಗುತ್ತದೆ ಎಂದು ತಿಳಿಸಿದರು.

ಬುದ್ಧ ವಿಹಾರ ಅಡದುರ ಬೀದರ್ ಭಂತೆ ವರಜ್ಯೋತಿ ವೈಶಾಲಿ, ಚಿತ್ರದುರ್ಗ ಛಲವಾದಿ ಗುರುಪೀಠ ಬಸವನಾಗಿದೇವ ದಿವ್ಯ ಸಾನಿಧ್ಯ ವಹಿಸಿದ್ದರು. ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಬಸವರಾಜ ಪಾಟೀಲ್ ಊಡಗಿ, ಸಿಪಿಐ ಮಹಾದೇವ ದಿಡ್ಡಿಮನಿ, ಅಬ್ದುಲ್ ರಶೀದ ರಂಜೋಳ, ಓಂಪ್ರಕಾಶ್ ಪಾಟೀಲ, ಪೌರಾಯುಕ್ತ ಶರಣಯ್ಯಸ್ವಾಮಿ, ಪ್ರಮುಖರಾದ

ಶಿವಕುಮಾರ್ ಪಾಟೀಲ್ ತೇಲ್ಕೂರ, ಕಾಡಾ ಮಾಜಿ ಅಧ್ಯಕ್ಷ ಮಹಾಂತಪ್ಪ ಸಂಗಾವಿ, ತಾಪಂ ಮಾಜಿ ಸದಸ್ಯ ಜೈ ಭೀಮ್ ಊಡಗಿ, ನಗರಸಭೆ ಆಶ್ರಯ ಕಮಿಟಿ ಸದಸ್ಯ ವಿಲಾಸ್ ಗೌತಮ್ ನೀಡಗುಂದಾ, ಬಹುಜನ ಸಮಾಜ ಪಾರ್ಟಿ ತಾಲ್ಲೂಕು ಅಧ್ಯಕ್ಷ ರೇವಣಸಿದ್ದಪ್ಪ ಸಿಂದೆ,

ಛಲವಾದಿ ಸಮಾಜ ತಾಲೂಕು ಅಧ್ಯಕ್ಷರು ಶಿವಕುಮಾರ್ ತೊಟ್ನಳ್ಳಿ, ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಗೌತಮ್ ಆರ್ ಹಳ್ಳಿ, ಶರಣಪ್ಪ ತೇಲ್ಕೂರ, ಸುನೀಲ್ ಹಳ್ಳಿ, ಪ್ರಶಾಂತ್ ಸೇಡಂಕರ, ಸಿದ್ದು ಊಡಗಿ, ಅಂಬರೀಶ ಎಮ್ ಗುಡಿ, ಅರುಣ ಮಾಡಬೂಳಕರ್, ಸುಭಾಷ್ ಹಣಮನಹಳ್ಳಿ, ಬಸವರಾಜ ಸಾಗರ, ಲಕ್ಷ್ಮಣ ಮಂತ್ರಿ ಕೋಡ್ಲಾ ಸೇರಿದಂತೆ ಅನೇಕರಿದ್ದರು. ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಸನ್ಮಾನಿಸಲಾಯಿತು.

ಶ್ರೀಶೈಲ ಬಟಗೀರಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಲಕ್ಷ್ಮಣ ರಂಜೋಳಕರ್ ಕಾರ್ಯಕ್ರಮ ನಿರೂಪಿಸಿದರು. ಸಿದ್ಧಾರ್ಥ ಚಿಂತಪಳ್ಳಿ ಸ್ವಾಗತಿಸಿದರು. ಸಾಗರ ಹಳ್ಳಿ ವಂದಿಸಿದರು.

ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ

ಸರ್ಕಾರಿ ನೌಕರರು ಆಡಳಿತದ ಬೆನ್ನೆಲುಬು: ರೆಡ್ಡಿ ಶ್ರೀನಿವಾಸ

ಕೊಪ್ಪಳ,ಮೇ.01-

ದೇಶಕ್ಕೆ ರೈತರೇ ಬೆನ್ನೆಲುಬು ಎನ್ನುವಂತೆ, ಆಡಳಿತಕ್ಕೆ ಸರ್ಕಾರಿ ನೌಕರರೇ ಬೆನ್ನೆಲುಬು. ಸರ್ಕಾರದ ಸೇವೆಯನ್ನು ನೇರವಾಗಿ ಸಾರ್ವಜನಿಕರಿಗೆ ತಲುಪಿಸುವ ಮಹತ್ವದ ಕಾರ್ಯವನ್ನು ಸರ್ಕಾರಿ ನೌಕರರು ಮಾಡುತ್ತಾರೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಅವರು ಹೇಳಿದರು.



ಗುರುವಾರದಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ ಕೊಪ್ಪಳ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರದ ಸೇವೆಗಳು, ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸುವುದು ಪುಣ್ಯದ ಕೆಲಸ, ಅದನ್ನು ಸರ್ಕಾರಿ ನೌಕರರು ಸೇವಾ ಮನೋಭಾವನೆಯಿಂದ ಸಾರ್ವಜನಿಕರಿಗೆ ತಲುಪಿಸುತ್ತಾರೆ. ಪ್ರಸ್ತುತ ವಿಷಯ ಹೇಳಬೇಕೆಂದರೆ ಸರ್ಕಾರದ ಮಹಾತ್ವಾಕಾಂಕ್ಷಿಯ ಪಂಚ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ನಮ್ಮ ಜಿಲ್ಲೆಯಲ್ಲಿ 3.20 ಲಕ್ಷ ಫಲಾನುಭವಿಗಳಿಗೆ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ಒದಗಿಸಿದ್ದಾರೆ. ಸರ್ಕಾರಿ ನೌಕರರು ಸರ್ಕಾರದ ಬೆನ್ನೆಲುಬಾಗಿ ಕರ್ತವ್ಯ ನಿರ್ವಹಿಸುತ್ತಾರೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಮಾತನಾಡಿ, ಸರ್ಕಾರಿ ನೌಕರರು ಕಾರ್ಯಾಂಗದ ಬಹು ಮುಖ್ಯ ಅಂಗ. ಸರ್ಕಾರ ಮತ್ತು ಸಾರ್ವಜನಿಕರ ನಡುವಿನ ಸಂಪರ್ಕ ಕೊಂಡಿಯಾಗಿ ನಾವೆಲ್ಲರೂ ಕಾರ್ಯನಿರ್ವಹಿಸುತ್ತೇವೆ. ನಾವು ಮಾಡುವ ಕೆಲಸ ಸರ್ಕಾರದ ಹೆಸರಾಗಿ ಮಾರ್ಪಡುತ್ತದೆ. ಅಂದರೆ ನಾವು ಉತ್ತಮ ರೀತಿಯಲ್ಲಿ ಕರ್ತವ್ಯ ನಿರ್ವಹಿಸಿದರೆ ಸರ್ಕಾರ ಒಳ್ಳೆಯ ಕೆಲಸ ಮಾಡುತ್ತದೆ ಎಂದು ಜನ ಮಾತಾನಾಡಿಕೊಳ್ಳುತ್ತಾರೆ. ಸರ್ಕಾರದ ಮುಖವಾಗಿ ನಾವಿರುತ್ತೇವೆ. ಸರ್ಕಾರದ ಮೂಲಭೂತ ಸೌಕರ್ಯಗಳನ್ನು ಜನರಿಗೆ ತಲುಪಿಸುವುದು ನಮ್ಮ ಕರ್ತವ್ಯ. ಮೇಲಧಿಕಾರಿಗಳು ಆದೇಶ ಹೊರಡಿಸುತ್ತಾರೆ, ಅದನ್ನು ಕಾರ್ಯರೂಪಕ್ಕೆ ತರುವುದು ನಮ್ಮೆಲ್ಲರ ಜವಾಬ್ದಾರಿ. ಹಲವಾರು ಒತ್ತಡಗಳ ನಡುವೆ ಕಾರ್ಯನಿರ್ವಹಿಸುವ ಸರ್ಕಾರಿ ನೌಕರರು ತಮ್ಮಲ್ಲಿ ಬರುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ, ಅಂತಃಕರಣದಿದ ವರ್ತಿಸಬೇಕು. ಒತ್ತಡ ನಿರ್ವಹಣೆಗೆ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು. ಆರೋಗ್ಯ ರಕ್ಷಣೆಗೆ ಒತ್ತು ನೀಡಬೇಕು. ವೈಯಕ್ತಿಕ ಕೆಲಸ, ಕುಟುಂಬಕ್ಕೂ ಆದ್ಯತೆ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಮಾತನಾಡಿ, ಸರ್ಕಾರಿ ನೌಕರರಿಗೆ ಒಂದು ದಿನವನ್ನಾಗಿ ಮಾಡಿ, ಅವರು ಮಾಡಿದ ಸೇವೆಗೆ ಗೌರವ ಸಲ್ಲಿಸುವುದು ವಿಶೇಷ ಸಂಗತಿ. ಬೇರೆ ರಾಜ್ಯಗಳಲ್ಲಿ ಈ ಕಾರ್ಯಕ್ರಮವಿಲ್ಲ. ನೌಕರಿಗೆ ಒತ್ತಡವಿರುವುದು ಸಾಮಾನ್ಯ. ಅದರಲ್ಲೂ ನೌಕರರು ಧನಾತ್ಮಕವಾಗಿ ಯೋಚಿಸಬೇಕು. ನಮ್ಮ ಸೇವೆಯೇ ನಮ್ಮನ್ನು ಗುರುತಿಸುವಂತಾಗಬೇಕು. ಸೇವಾ ಭಾವನೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ನಾಗರಾಜ ಆರ್.ಜುಮ್ಮನ್ನವರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರಿ ನೌಕರರ ದಿನವನ್ನು ಸರ್ಕಾರಿ ಕಾರ್ಯಕ್ರಮವಾಗಿ ಆಚರಿಸುತ್ತಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ. ನಮ್ಮ ಜಿಲ್ಲೆಯಲ್ಲಿ ಬದ್ಧತೆಯುಳ್ಳ ನೌಕರರಿದ್ದು, ಸರ್ಕಾರದ ಎಲ್ಲ ಕಾರ್ಯಕ್ರಮ, ಯೋಜನೆಗಳನ್ನು ಜಾರಿಗೆ ತರುವಲ್ಲಿ ಬಹುತೇಕ ಮೊದಲ 5 ರಲ್ಲಿ ಒಂದು ಸ್ಥಾನದಲ್ಲಿ ನಮ್ಮ ಜಿಲ್ಲೆಯ ಹೆಸರು ಇರುತ್ತದೆ. ಇದು ನಮ್ಮ ಜಿಲ್ಲೆಯ ನೌಕರರ ಕಾರ್ಯಕ್ಷಮತೆಯನ್ನು ಸೂಚಿಸುತ್ತದೆ. ಅದರಂತೆ ಸರ್ಕಾರದಿಂದ ನೌಕರರಿಗೆ ದೊರೆಯಬೇಕಾದ ಎಲ್ಲ ಸೌಕರ್ಯಗಳನ್ನು ಒದಗಿಸುವಲ್ಲಿ ಸರ್ಕಾರಿ ನೌಕರರ ಸಂಘ ಯಾವಾಗಲೂ ಮುಂದಿರುತ್ತದೆ. ಉದಾಹರಣೆಗೆ ಮಹಿಳಾ ನೌಕರರಿಗೆ ಶಿಶುಪಾಲನಾ ರಜೆ, ಮಾಸಿಕ ಒಂದರತೆ ಋತುಚಕ್ರ ರಜೆಯನ್ನು ಒದಗಿಸುವಲ್ಲಿ ನಮ್ಮ ಸಂಘದ ಪಾತ್ರ ಪ್ರಮುಖವಾಗಿದೆ. ಆದ್ದರಿಂದ ಎಲ್ಲರೂ ಪರಸ್ಪರ ಸಹಕಾರದಿಂದ, ಸಮನ್ವಯತೆಯಿಂದ ಹಾಗೂ ಸೇವಾ ಭಾವನೆಯಿಂದ ಕಾರ್ಯನಿರ್ವಹಿಸೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಸರ್ಕಾರಿ ಸೌಲಭ್ಯ ಒದಗಿಸುವಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ನೌಕರರಿಗೆ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಕೃಷ್ಣಮೂರ್ತಿ ಟಿ., ಉಪವಿಭಾಗಾಧಿಕಾರಿ ಕ್ಯಾ.ಮಹೇಶ ಮಾಲಗಿತ್ತಿ, ಜಂಟಿ ತೋಟಗಾರಿಕೆ ನಿರ್ದೇಶಕ ಕೃಷ್ಣ ಉಕ್ಕುಂದ, ಅಬಕಾರಿ ಉಪ ಅಧೀಕ್ಷಕ ಆಂಜಿನೇಯ, ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಕಾರ್ಯಾಧ್ಯಕ್ಷ ಬೀರಪ್ಪ ಅಂಡಗಿ, ಜಿಲ್ಲಾ ಕಾರ್ಯದರ್ಶಿ ಶಿವಪ್ಪ ಜೋಗಿ, ಖಜಾಂಚಿ ಜಯತೀರ್ಥ ದೇಸಾಯಿ, ರಾಜ್ಯ ಪರಿಷತ್ ಸದಸ್ಯ ಮೆಹಮೂದ್ ಆಸೀಫ್‌ಅಲಿ, ಗೌರವ ಅಧ್ಯಕ್ಷ ಸಿದ್ದಪ್ಪ ಮೇಳಿ, ಸೇರಿದಂತೆ ರಾಜ್ಯ ಸಂಘದ ಪದಾಧಿಕಾರಿಗಳು, ಜಿಲ್ಲಾ ಹಿರಿಯ ಉಪಾಧ್ಯಕ್ಷರು, ತಾಲ್ಲೂಕು/ಯೋಜನಾ ಘಟಕದ ಅಧ್ಯಕ್ಷರು, ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.



ರೈತರ, ಮಹಿಳೆಯರ ವಿಚಾರದಲ್ಲಿ ಸರಕಾರ ವೈಫಲ್ಯ : ನಿಖಿಲ್ ಕುಮಾರಸ್ವಾಮಿ ಆರೋಪ

ಸೇಡಂ,ಮೇ.01-

ಬರಗಾಲ ಹಾಗೂ ಅತಿವೃಷ್ಟಿಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸಮರ್ಪಕ ಪರಿಹಾರ ನೀಡಲು ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರು ಜನರ ಸಮಸ್ಯೆಗಳ ಪರಿಹಾರಕ್ಕಿಂತ ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳುವುದರಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಆರೋಪಿಸಿದರು.

2002ರಲ್ಲಿ ಡಾ. ನಂಜುಂಡಪ್ಪ ನೀಡಿದ ಅತಿ ಹಿಂದುಳಿದ ಪ್ರದೇಶಗಳ ವರದಿ ಬಳಿಕವೂ ಪರಿಸ್ಥಿತಿ ಬದಲಾಗಿಲ್ಲ. ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಸೇಡಂ, ಆಳಂದ ಹಾಗೂ ಅಫಜಲಪುರ ಕ್ಷೇತ್ರಗಳು ಇನ್ನೂ ಮೂಲಸೌಕರ್ಯ ಕೊರತೆಯಿಂದ ಬಳಲುತ್ತಿವೆ ಎಂದು ಹೇಳಿದರು. ಕೆಕೆಆರ್‌ಡಿಬಿ ಮೂಲಕ ಸಾವಿರಾರು ಕೋಟಿ ರೂ. ಅನುದಾನ ಬಂದರೂ ಅದು ರಸ್ತೆ ಮತ್ತು ಕಟ್ಟಡ ಕಾಮಗಾರಿಗಳಿಗೆ ಮಾತ್ರ ಸೀಮಿತವಾಗಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ 3,000ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿರುವುದು ದುಃಖದ ಸಂಗತಿ. ಬೀದರ್, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ರೈತರ ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ ಎಂದು ಹೇಳಿದರು. ಮಹಿಳಾ ಸಬಲೀಕರಣದ ವಿಚಾರದಲ್ಲೂ ಕಾಂಗ್ರೆಸ್ ದ್ವಂದ್ವ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿದ ಅವರು, ತಿಂಗಳಿಗೆ ಹಣ ನೀಡುವುದು ಮಾತ್ರ ಸಬಲೀಕರಣವಲ್ಲ. ಎಚ್.ಡಿ. ದೇವೇಗೌಡ ಅವರ ಅವಧಿಯಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ 50% ಮೀಸಲಾತಿ ಜಾರಿಗೆ ತಂದದ್ದು ಮಹಿಳೆಯರಿಗೆ ನಿಜವಾದ ಶಕ್ತಿ ನೀಡಿದೆ ಎಂದರು. ಇದೇ ವೇಳೆ ಬೆಂಗಳೂರಿನ ಆಸ್ಪತ್ರೆಯಲ್ಲಿ ನಡೆದ ದುರಂತ ಘಟನೆ ಆಡಳಿತ ವೈಫಲ್ಯವನ್ನು ತೋರಿಸುತ್ತದೆ ಎಂದು ಕಿಡಿಕಾರಿದ ಅವರು, ಸರ್ಕಾರದ ಭ್ರಷ್ಟಾಚಾರ ಮತ್ತು ಆಡಳಿತ ದೌರ್ಬಲ್ಯಗಳ ವಿರುದ್ಧ ಜೆಡಿಎಸ್ ರಾಜ್ಯಾದ್ಯಂತ ಜನಜಾಗೃತಿ ಆಂದೋಲನ ಕೈಗೊಳ್ಳಲಿದೆ ಎಂದು ಘೋಷಿಸಿದರು. ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಬಾಲರಾಜ ಗುತ್ತೇದಾರ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

ಸಿಸಿಐ ಕಾರ್ಖಾನೆ ಪುನರಾರಂಭಕ್ಕೆ ಭರವಸೆ

ಸೇಡಂ ತಾಲೂಕಿನ ಕುರುಕುಂಟಾದಲ್ಲಿ ಸ್ಥಗಿತಗೊಂಡಿರುವ ಸಿಸಿಐ ಸಿಮೆಂಟ್ ಕಾರ್ಖಾನೆಯನ್ನು ಪುನರಾರಂಭಿಸುವಂತೆ ಸ್ಥಳೀಯ ಮುಖಂಡರು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮನವಿ ಮಾಡಿದ್ದಾರೆ. ಈ ಕುರಿತು ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಮುಂದಿನ ದಿನಗಳಲ್ಲಿ ಕಾರ್ಖಾನೆ ಪುನರಾರಂಭವಾಗುವ ನಿರೀಕ್ಷೆ ಇದೆ ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ವಾಣಿಜ್ಯ ಸಿಲಿಂಡರ್‌ಗಳ ಬೆಲೆ 993 ರೂ. ಏರಿಕೆ: ಇಂದಿನಿಂದಲೇ ಹೊಸ ದರ ಜಾರಿ

ಮಾಡಲಾಗಿದ್ದು, ಬಳಿಕ ಮತ್ತೆ ಏಪ್ರಿಲ್ 1 ರಂದು 19 ಕೆಜಿ ಸಿಲಿಂಡರ್ ದರವು ಸುಮಾರು 200 ರೂ. ಹೆಚ್ಚಳವಾಗಿತ್ತು.

ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ, ಇಂದಿನಿಂದ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 993 ರೂ.ಗಳಷ್ಟು ಏರಿಕೆಯಾಗಿದೆ. ಇಂದಿನಿಂದ, ಈ ಸಿಲಿಂಡರ್ ಬೆಲೆ 3,071 ರೂ. ಆಗಿದ್ದು, ಈ ಹಿಂದಿನ ಬೆಲೆ 2,078ರಷ್ಟಿತ್ತು. ಮುಂಬೈ ಮಹಾನಗರದಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯೂ ಏರಿಕೆಯಾಗಿದೆ. ಇಲ್ಲಿ, ಸಿಲಿಂಡರ್ ಬೆಲೆ 3,024 ರೂ.ಗೆ ಏರಿಕೆಯಾಗಿದೆ. ಹಿಂದೆ, 2,031 ರೂ. ಆಗಿತ್ತು.

ಕೋಲ್ಕತ್ತಾದಲ್ಲಿ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯನ್ನು 994 ರೂ.ಗಳಷ್ಟು ಹೆಚ್ಚಿಸಲಾಗಿದೆ. ಬೆಲೆ ಏರಿಕೆ ತಕ್ಷಣದಿಂದ ಜಾರಿಗೆ ಬಂದಿದ್ದು, ಸಿಲಿಂಡರ್ 3,202 ರೂ.ಗೆ ದೊರೆಯುತ್ತಿದೆ. ಹಿಂದೆ, ಇದರ ಬೆಲೆ 2,208 ರೂ. ಇತ್ತು. ಚೆನ್ನೈಗೆ ಸಂಬಂಧಿಸಿದಂತೆ, ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 3,237 ರೂ.ಗೆ ಏರಿಕೆಯಾಗಿದೆ. ಚೆನ್ನೈನಲ್ಲಿ ಹಿಂದೆ, ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳು ರೂ. 2,246.50ಕ್ಕೆ ಮಾರಾಟ ಮಾಡಲಾಗುತ್ತಿತ್ತು.

ಇಂದಿನಿಂದ ಹೊಸ ನಿಯಮಗಳು ಜಾರಿಗೆ: ಮೇ 1ರಿಂದ ಜಾರಿಗೆ ಬರುವಂತೆ, ಕೇಂದ್ರ ಸರ್ಕಾರ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ವಿತರಣೆಗೆ ಹೊಸ ನಿಯಮಗಳನ್ನು ಜಾರಿಗೆ ತಂದಿದೆ. ಗ್ರಾಹಕರ ಅನುಕೂಲ ಹಾಗೂ ಪೂರೈಕೆ ವ್ಯವಸ್ಥೆಯ ಪಾರದರ್ಶಕತೆ ಹೆಚ್ಚಿಸಲು ಮೇ 1ರಿಂದ ಹೊಸ ನಿಯಮಗಳನ್ನು ಜಾರಿಗೆ ತರುವುದಾಗಿ ಘೋಷಿಸಿದೆ.

ಭದ್ರತಾ ಕ್ರಮವಾಗಿ, ವಿತರಣಾ ದೃಢೀಕರಣ ಕೋಡ್ () ವ್ಯವಸ್ಥೆಯನ್ನು ಕಡ್ಡಾಯಗೊಳಿಸಲಾಗಿದೆ. ಗ್ಯಾಸ್ ವಿತರಣೆ ವೇಳೆ ಗ್ರಾಹಕರ ಮೊಬೈಲ್‌ಗೆ ಕಳುಹಿಸಲಾಗುತ್ತದೆ. ಈ ಯನ್ನು ವಿತರಣಾ ಸಿಬ್ಬಂದಿಗೆ ನೀಡಿದ ನಂತರವೇ ಸಿಲಿಂಡರ್ ಹಸ್ತಾಂತರವಾಗುತ್ತದೆ. ಇದರಿಂದ ವಿತರಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಭದ್ರತೆ ಹೆಚ್ಚಲಿದೆ.

ಇನ್ನೊಂದು ಪ್ರಮುಖ ಬದಲಾವಣೆ ಎಂದರೆ, ಸಿಲಿಂಡರ್ ಬುಕ್ಕಿಂಗ್ ನಡುವಿನ ಅವಧಿ. ನಗರ ಪ್ರದೇಶಗಳಲ್ಲಿ ಕನಿಷ್ಠ 25 ದಿನಗಳ ಅಂತರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 45 ದಿನಗಳ ಅಂತರವನ್ನು ನಿಗದಿಪಡಿಸಲಾಗಿದೆ. ಕಾಳಸಂತೆಯಲ್ಲಿ ಮಾರಾಟವನ್ನು ತಡೆಯುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ.

ಅದೇ ರೀತಿ, ಒಂದೇ ಮನೆಯಲ್ಲಿ ಪೈಪ್ಡ್ ಗ್ಯಾಸ್ () ಮತ್ತು ಎರಡನ್ನೂ ಒಂದೇ ಸಮಯದಲ್ಲಿ ಬಳಸಲು ಅವಕಾಶ ಇರುವುದಿಲ್ಲ. ಈಗಾಗಲೇ ಎರಡೂ ಸಂಪರ್ಕ ಹೊಂದಿರುವವರು ಒಂದನ್ನು ತ್ಯಜಿಸಬೇಕಾಗುತ್ತದೆ. ಇ-ಕೆವೈಸಿ ಪ್ರಕ್ರಿಯೆಯನ್ನು ಕಡ್ಡಾಯಗೊಳಿಸಲಾಗಿದ್ದು, ಇದನ್ನು ಪೂರ್ಣಗೊಳಿಸದ ಗ್ರಾಹಕರು ಸಬ್ಸಿಡಿ ಸೌಲಭ್ಯ ಕಳೆದುಕೊಳ್ಳುವ ಸಾಧ್ಯತೆ ಇದೆ. ಈ ನಿಯಮಗಳು ಗ್ರಾಹಕರ ಸುರಕ್ಷತೆ ಮತ್ತು ಸರಬರಾಜು ವ್ಯವಸ್ಥೆಯ ಸುಧಾರಣೆಗೆ ನೆರವಾಗಲಿವೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

ಇರಾನ್ ಯುದ್ಧ ಮುಗಿದ ಅಧ್ಯಾಯ ; ಟ್ರಂಪ್ ದಿಢೀರ್ ಘೋಷಣೆ

ನಡುವಿನ ಈ ಕಾನೂನು ಸಂಘರ್ಷವು ಅಮೆರಿಕದ ವಿದೇಶಾಂಗ ನೀತಿಯಲ್ಲಿ ಹೊಸ ಬಿಕ್ಕಟ್ಟನ್ನು ಸೃಷ್ಟಿಸಿದ್ದು, ಇರಾನ್ ಜೊತೆಗಿನ ಶಾಂತಿ ಒಪ್ಪಂದವು ಯಾವ ದಿಕ್ಕಿನಲ್ಲಿ ಸಾಗಲಿದೆ ಎಂಬುದು ಇಡೀ ಜಗತ್ತಿನ ಕುತೂಹಲಕ್ಕೆ ಕಾರಣವಾಗಿದೆ.

ಜಿಲ್ಲಾಡಳಿತದಿಂದ ಭಗವಾನ್ ಬುದ್ಧರ 2570ನೇ ಜಯಂತಿ ಆಚರಣೆ

ಬುದ್ಧರ ಆದರ್ಶ, ತತ್ವಗಳನ್ನು ಅನುಸರಿಸಿ: ಸಹಾಯಕ ಆಯುಕ್ತ. ಡಾ.ಹಂಪಣ್ಣ ಸಜ್ಜನ

ಹುಟ್ಟಿದ್ದರು ಅವರು , ತಮ್ಮ 35ನೇ ವರ್ಷದಲ್ಲಿ ವೈರಾಗ್ಯ ಕಡೆಗೆ ಗಮನ ಹರಿಸಿದರು. ಅವರು ತಮ್ಮ ಜ್ಞಾನದ ಮೂಲಕ ಪಂಚ ತತ್ವವನ್ನು ಅನುಸರಿಸಿದರು. ಅಶೋಕ ಮಹಾರಾಜರು ಬೌದ್ಧ ಧರ್ಮವನ್ನು ಹೆಚ್ಚಿನ ಸಂಖ್ಯೆಯಲ್ಲಿ ಪ್ರಚಾರಕ್ಕೆ ಆದ್ಯತೆ ನೀಡಿದರು. ನಂತರ ಡಾ.ಬಿ.ಆರ್.ಅಂಬೇಡ್ಕರ್ ಅವರು ಬೌದ್ಧ ಧರ್ಮವನ್ನು ಸ್ವೀಕರಿಸಿದರು. ಈ ವೇಳೆ ಲಕ್ಷಾಂತರ ಜನರು ಈ ಧರ್ಮವನ್ನು ಸೇರಿದರು. ಅವರ ಪಂಚ ತತ್ವ ವಿಚಾರಧಾರೆಗಳನ್ನು ಎಲ್ಲರೂ ಮೈಗೂಡಿಸಿಕೊಂಡು ಹೋಗಬೇಕು. ಅವರ ಮಾರ್ಗದರ್ಶನ ಪಾಲಿಸಬೇಕು ಎಂದರು.

ಉಪನ್ಯಾಸಕರಾಗಿ ರಾಯಚೂರು ತಾಲೂಕಿನ ಶಕ್ತಿನಗರದ ಕೆಪಿಸಿಎಲ್, ಪಂ.ಜಾತಿ ಹಾಗೂ ಪಂ.ವರ್ಗದ ನೌಕರರ ಸಂಘದ ಅಧ್ಯಕ್ಷ ಗೌತಮ ಕಟ್ಟಿಮನಿ ಅವರು ಮಾತನಾಡಿ, ಮೌಢ್ಯ ನಿರಾಕರಿಸಿ ಸತ್ಯವನ್ನು ಅನುಸರಿಸುವ ಮೂಲಕ ನೇರವಾದ ದೃಷ್ಟಿ ಕೋನ ಬೆಳೆಸಿಕೊಳ್ಳಬೇಕು ಎಂದು ಭೋದಿಸಿದ ಗೌತಮ ಬುದ್ಧರು, ಸಮಾಜದಲ್ಲಿ ಶಾಂತಿ ಸಹಬಾಳ್ವೆಯ ಜೀವನ ನಿರ್ವಹಣೆಯ ತತ್ವವನ್ನು ಜಗತ್ತಿಗೆ ಸಾರಿದರು ಎಂದರು.

ವಿವಿಧ ಗಣ್ಯರಿಂದ ಗೌರವ ಸಲ್ಲಿಕೆ: ಗೌತಮ ಬುದ್ಧರ 2570ನೇ ಜಯಂತಿ ಅಂಗವಾಗಿ ನಗರದ ಕೇಂದ್ರ ಗ್ರಂಥಾಲಯ ಎದುರುಗಡೆ ಇರುವ ಸಿದ್ಧಾರ್ಥ ಬುದ್ಧ ವಿಹಾರದಲ್ಲಿ ಗೌತಮ ಬುದ್ಧರ ಪ್ರತಿಮೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸೇರಿದಂತೆ ವಿವಿಧ ಗಣ್ಯರಿಂದ ಗೌರವ ಸಲ್ಲಿಸಲಾಯಿತು.

ನಂತರ ಮಹಾತ್ಮಗಾಂಧಿ ಕ್ರೀಡಾಂಗಣ, ಡಾ.ಬಿ.ಆರ್. ಅಂಬೇಡ್ಕರ ವೃತ್ತದ ಮುಖಾಂತರ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರಿಗೂ ಭಗವಾನ ಬುದ್ಧರ ಭಾವಚಿತ್ರ ಮೆರವಣಿಗೆ ಮಾಡಲಾಯಿತು.

ಇದಕ್ಕೂ ಮುಂಚೆ ಗೌತಮ ಬುದ್ಧರ ವಂದನೆಯನ್ನು ಮಾಡಲಾಯಿತು.

ಕೃಷಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಮಲೇಶ ಕೋಮಿನ್, ಸಮಾಜದ ಮುಖಂಡರಾದ ಆರ್.ತಿಮ್ಮರೆಡ್ಡಿ, ಶ್ರೀನಿವಾಸ್, ನರಸಿಂಹಲು ಸೇರಿದಂತೆ ಇತರರು ಇದ್ದರು.

ಯಾಪಲದಿನ್ನಿ: ಕಲಬೆರಕೆ ಸೆಂಧಿ ಮಾರಾಟ ಇಬ್ಬರು ಬಂಧನ

ಯೋಗ್ಯವಲ್ಲದ ವಿಷಪೂರಿತ ಸಿ.ಹೆಚ್.ಪೌಡರದಿಂದ ತಯಾರಿಸಿದ ಕಲಬೆರಕೆ ಹೆಂಡವನ್ನು ತಂದು ಅನಧಿಕೃತವಾಗಿ ತಮ್ಮ ಸ್ವಂತ ಲಾಭಕ್ಕಾಗಿ ಮಾರಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿ ಬಂದಿದ್ದು, ದಾಳಿಮಾಡಿ ಆರೋಪಿತರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ದೂರು ನೀಡಿದ್ದರಿಂದ ಇವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.ನಂತರ ಪಂಚರ ಸಮಕ್ರಮದಲ್ಲಿ ದಾಳಿ ಮಾಡಿ ಅಂದಾಜು ಒಂದೊಂದು ಲೀಟರನ 67 ಸಿ.ಹೆಚ್. ಪೌಡರ್ ಮಿಶ್ರಿತ ಹೆಂಡದ ಪಾಕೇಟ್ ಗಳು ಅಂ.ಕಿ 1340 ಬೆಲೆ ಬಾಳುವ ಸೆಂಧಿ ಪಂಚನಾಮೆ ಕಾಲಕ್ಕೆ ಜಪ್ತಿ ಮಾಡಿಕೊಂಡು ಇಬ್ಬರನ್ನು ಆರೋಪಿತರನ್ನು ನ್ಯಾಯಾಂಗ ಬಂಧನದಕ್ಕೆ ನೀಡಲಾಗಿದೆ.

ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ

ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ

ಏರ್ಪಡಿಸಿ, ರಕ್ತದ ಕೊರತೆಯಾಗದಂತೆ ನೋಡಿಬೇಕು. ಸಂಗ್ರಹಣೆಯ 25% ರಷ್ಟು ರಿಮ್ಸ್ ಬ್ಲಡ್ ಬ್ಯಾಂಕ್‌ಗೆ ನೀಡುವ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದರು.

100 ದಿನಗಳ ಕ್ಷಯಮುಕ್ತ ಅಭಿಯಾನಕ್ಕೆ ಸೂಕ್ತ ಯೋಜನೆ ರೂಪಿಸಿ: 100 ದಿನಗಳ ಕ್ಷಯಮುಕ್ತ ಅಭಿಯಾನದಡಿ ಕ್ಷಯರೋಗ ನಿರ್ಮೂಲನೆ ಮಾಡಲು ಮಾನದಂಡದಡಿ ಗುರುತಿಸಲ್ಪಟ್ಟ 209 ಗ್ರಾಮಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕುಟುಂಬದ ಎಲ್ಲ ಸದಸ್ಯರು ಸೇರಿದಂತೆ ಸಂಪೂರ್ಣ ಜನಸಂಖ್ಯೆಯನ್ನು ಪರೀಕ್ಷಿಸಿ ಅಗತ್ಯವಿದ್ದವರಿಗೆ ಕಫ ಪರೀಕ್ಷೆ, ಹ್ಯಾಂಡ್‌ಹೆಲ್ಡ್ ಎಕ್ಸ್‌ರೇ ಮಿಷಿನ್, ಮುಂತಾದವುಗಳಿಂದ ಪರೀಕ್ಷಿಸಿ, ಸೋಂಕು ಖಚಿತವಾದಲ್ಲಿ ಉಚಿತ ಚಿಕಿತ್ಸೆ ಯನ್ನು ನೀಡಿ ಗುಣಪಡಿಸಲು, ಅರ್ಹ ವ್ಯಕ್ತಿಗಳಿಗೆ ನಿಕ್ಷಯ್ ಮಿತ್ರ ಅಡಿ ದಾನಿಗಳಿಂದ ಪೌಷ್ಟಿಕ ಆಹಾರ ಒದಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

2030ರ ಒಳಗೆ ಕ್ಷಯರೋಗ ಮುಕ್ತ ಭಾರತದ ಗುರಿ ತಲುಪಲು ಕಂದಾಯ ಇಲಾಖೆ, ಗ್ರಾಮ ಪಂಚಾಯತ, ಸ್ಥಳೀಯ ಸಂಸ್ಥೆಗಳ, ವಿವಿಧ ಇಲಾಖೆಗಳ ಸಹಕಾರ ಪಡೆದು ಯಶಸ್ವಿಗೊಳಿಸಲು ಸೂಚಿಸಿದರು.

ಗುಣಮಟ್ಟದಿಂದ ಹೆರಿಗೆ ನಿರ್ವಹಣೆ: ಜಿಲ್ಲೆಯ ಎಲ್ಲ ಆಸ್ಪತ್ರೆಗಳಲ್ಲಿನ ಸಂಪನ್ಮೂಲಗಳ ಬಳಕೆಯಿಂದ ಗುಣಮಟ್ಟದ ಸೇವೆ ನೀಡುತ್ತಿರುವುದು ಆಶಾದಾಯಕವಾಗಿದ್ದು, ಯಾವುದೇ ಪರಿಕರ, ಉಪಕರಣಗಳ ಅಗತ್ಯತೆವಿದ್ದರೆ ನಿಯಮಾನುಸಾರ ಬೇಡಿಕೆ ಸಲ್ಲಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ ಚಿಕಿತ್ಸ ಕ ಡಾ.ವಿಜಯ ಶಂಕರ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಡಿಎಸ್‌ಓ ಡಾ.ಗಣೇಶ್ ಕೆ, ಡಿಟಿಓ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ಪರಿಸರ ಇಲಾಖೆ ಅಧಿಕಾರಿ, ಸಹಾಯಕ ಔಷಧ ನಿಯಂತ್ರಕರು ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ತಾಯಿ ಮಕ್ಕಳ ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು, ಡಿಹೆಚ್‌ಇಓ, ಡಿಪಿಎಮ್, ಡಿಡಿಎಮ್, ಎನ್‌ಕ್ಯೂಎಎಸ್, ಆರ್‌ಕೆಎಸ್‌ಕೆ ಸಲಹೆಗಾರರು ಹಾಗೂ ಹೆಚ್‌ಐವಿ ಏಡ್ಸ್ ನಿರ್ಮೂಲನೆಗೆ ಕೆಲಸ ಮಾಡುತ್ತಿರುವ ಸಂಘಟನೆಗಳ ಪದಾಧಿಕಾರಿಗಳು, ಡ್ಯಾಪ್ಕೋ ಸಿಬ್ಬಂದಿಗಳು ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

ಪಡಿತರ ಅಕ್ಕಿಯ ಅಕ್ರಮ ಮಾರಾಟಕ್ಕೆ ಕಡಿವಾಣ ಹಾಕಿ: ರೆಡ್ಡಿ ಶ್ರೀನಿವಾಸ ನಿರ್ದೇಶನ



ಕೊಪ್ಪಳ,ಮೇ.01-

ಅನ್ನಭಾಗ್ಯ ಯೋಜನೆಯಡಿ ನೀಡುತ್ತಿರುವ ಪಡಿತರ ಅಕ್ಕಿಯನ್ನು ಕಳ್ಳಸಾಗಣೆ ಮಾಡುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ಜಿಲ್ಲೆಯಲ್ಲಿ ಪಡಿತರ ಅಕ್ಕಿ ಕಳ್ಳಸಾಗಣೆಗೆ ಯಾವುದೇ ರೀತಿಯ ಅವಕಾಶ ನೀಡದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಆಹಾರ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಗುರುವಾರದಂದು ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವ ಪಡಿತರ ಧಾನ್ಯಗಳನ್ನು ಮಾರಾಟಕ್ಕೆ ಅವಕಾಶವಿರುವುದಿಲ್ಲ. ಆದ್ಯಾಗೂ ಸಹ ಪಡಿತರ ಅಕ್ಕಿಯನ್ನು ಅಕ್ರಮ ದಾಸ್ತಾನು ಮತ್ತು ಮಾರಾಟ ಮಾಡುತ್ತಿರುವ ಪ್ರಕರಣಗಳು ವರದಿಯಾಗಿದೆ. ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ತ್ವರಿತವಾಗಿ ಕ್ರಮ ಕೈಗೊಳ್ಳುವುದರ ಜೊತೆಗೆ ಅವರ ಮೇಲೆ ಚಾರ್ಜ್ ಶೀಟ್ ಹಾಕುವ ವ್ಯವಸ್ಥೆಯಾಗಬೇಕು. ಅಕ್ರಮ ಪಡಿತರ ಚೀಟಿ ಮಾರಾಟಕ್ಕೆ ಸಂಬಂಧಿಸಿದಂತೆ ನ್ಯಾಯಾಲಯವು ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಿದ್ದು, ಇದರ ಬಗ್ಗೆ ಜನರಿಗೆ ಅರಿವು ಮೂಡಿಸಬೇಕು. ಪಡಿತರ ವಿತರಣೆಯನ್ನು ಜನರಿಗೆ ಅನುಕೂಲವಾಗುವಂತೆ ಮಾಡಿ. ಈ ಹಿನ್ನಲೆಯಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸಬೇಕು. ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಸಿಸಿ ಕ್ಯಾಮರಾ ಅಳವಡಿಕೆಗೆ ಕ್ರಮ ಕೈಗೊಳ್ಳಿ. ಆಹಾರ ಸಾಮಾಗ್ರಿಗಳ ವಿತರಣೆಗೂ ಮುನ್ನ ಅದರ ಗುಣಮಟ್ಟವನ್ನು ಪರಿಶೀಲಿಸಬೇಕು. ಈ ಬಗ್ಗೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಎಲ್ಲಾ ಅಧ್ಯಕ್ಷರು, ಸದಸ್ಯರು ಸಹ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದರು.

ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳು ತಮ್ಮ ಸಮಸ್ಯೆಗಳನ್ನು ಪರಿಹರಿಸಲು ಸಿಡಿಪಿಓ ಕಛೇರಿಗೆ ಭೇಟಿ ನೀಡುವ ಸಂದರ್ಭದಲ್ಲಿ ಅವರಿಗೆ ಸರಿಯಾದ ರೀತಿಯಲ್ಲಿ ಸ್ಪಂದಿಸುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ. ಇದನ್ನು ಕೂಡಲೇ ಸರಿಪಡಿಸಿಕೊಳ್ಳಬೇಕು. ಮರಣ ಹೊಂದಿದ ಫಲಾನುಭಿಗಳಿಗೆ ಸಹಾಯಧನ ಸಂದಾಯವಾಗುತ್ತಿದ್ದಲ್ಲಿ ತಕ್ಷಣ ಅದನ್ನು ನಿಲ್ಲಿಸಲು ಕ್ರಮ ಕೈಗೊಳ್ಳಬೇಕು. ಗೃಹಜ್ಯೋತಿ ಯೋಜನೆಯಡಿ ನೋಂದಣಿಯಾಗದಿರುವ ಅರ್ಜಿಗಳನ್ನು ಪರಿಶೀಲಿಸಿ, ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಸರ್ಕಾರದಿಂದ ಯುವನಿಧಿ ಪ್ಲಸ್ ಉಪಕ್ರಮದಡಿಯಲ್ಲಿ ನೀಡುತ್ತಿರುವ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳನ್ನು ನೋಂದಾಯಿಸಬೇಕು. ಶಕ್ತಿ ಯೋಜನೆಯಡಿ ಇಲ್ಲಿಯವರೆಗೆ ನಮ್ಮ ಜಿಲ್ಲೆಯಲ್ಲಿ ಸುಮಾರು 11 ಕೋಟಿ 22 ಲಕ್ಷಕ್ಕೂ ಅಧಿಕ ಮಹಿಳಾ ಫಲಾನುಭವಿಗಳು ಉಚಿತ ಬಸ್ ಸೌಲಭ್ಯವನ್ನು ಪಡೆದುಕೊಂಡಿದ್ದಾರೆ ಎಂದು ಹೇಳಿದರು.

ಜನ ಸಾಮಾನ್ಯರ ಏಳ್ಗೆಗಾಗಿ ರಾಜ್ಯ ಸರ್ಕಾರವು ಶಕ್ತಿ ಯೋಜನೆ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಯುವನಿದಿ, ಈ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ರಾಜ್ಯ ಸರ್ಕಾರದ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳು ಬಡ, ಹಿಂದುಳಿದ ವರ್ಗಗಳ ಹಾಗೂ ಜನ ಸಾಮಾನ್ಯರ ಬದುಕಿಗೆ ಆಸರೆಯಾಗಿವೆ. ಈ ಯೋಜನೆಗಳಡಿ ನಮ್ಮ ಜಿಲ್ಲೆಯಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ ಸಾರ್ವಜನಿಕರಿಗೆ ತಿಳಿಸಬೇಕು. ಈ ಬಗ್ಗೆ ಹೆಚ್ಚಿನ ಪ್ರಚಾರ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು. ಗ್ರಾ.ಪಂ ವ್ಯಾಪ್ತಿಯಲ್ಲಿ ಗ್ಯಾರಂಟಿ ಯೋಜನೆಗಳ ಸಭೆ ನಡೆಯಬೇಕು. ಮೇ16 ಮತ್ತು 17 ರಂದು ನಡೆಯುವ ಕನಕಗಿರಿ ಉತ್ಸವದಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ಮಳಿಗೆಗಳನ್ನು ಹಮ್ಮಿಕೊಂಡು ಜನರಿಗೆ ಹೆಚ್ಚಿನ ಪ್ರಚಾರ ಮೂಡಿಸಲು ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಅರ್ಜಿ ಹಾಕಿದ ಫಲಾನುಭವಿಗಳ ಪೈಕಿ ಕೆಲವರಿಗೆ ಗೃಹಲಕ್ಷ್ಮಿ ಯೋಜನೆ ಸಹಾಯಧನ ಸಿಗುತ್ತಿಲ್ಲ. ಇದಕ್ಕಾಗಿ ಸೂಕ್ತ ಕಾರಣ ಏನು ಮತ್ತು ಅದಕ್ಕೆ ಯಾವ ರೀತಿ ಪರಿಹಾರ ಕಂಡುಕೊಳ್ಳಬಹುದು ಎಂಬುವುದರ ಬಗ್ಗೆ ಫಲಾನುಭವಿಗಳಿಗೆ ತಿಳಿಸಬೇಕು. ಮರಣ ಹೊಂದಿದ ಫಲಾನುಭವಿಗಳ ಮಾಹಿತಿಯನ್ನು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಆಯಾ ಗ್ರಾ.ಪಂ.ಗಳಿಗೆ ತಿಳಿಸುವ ಕೆಲಸ ಆಗಬೇಕು. ಗ್ರಾಮ ಸಭೆಗಳಲ್ಲಿಯೇ ಗ್ಯಾ.ಪಂ ಮಟ್ಟದ ಗ್ಯಾರಂಟಿ ಸಭೆಗಳನ್ನು ನಡೆಸಲು ಎಲ್ಲಾ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಯುವನಿಧಿ ಪ್ಲಸ್ ಕಾರ್ಯಕ್ರಮ ನಿರುದ್ಯೋಗಿ ವಿದ್ಯಾವಂತ ಯುವ ಜನರಿಗೆ ಉದ್ಯೋಗಕ್ಕೆ ಅರ್ಹರನ್ನಾಗಿ ಮಾಡುವ ಉದ್ದೇಶ ಹೊಂದಿದೆ. ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮಕ್ಕೆ ನೋಂದಣಿ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಬಿ ಖಾದ್ರಿ, ಮಂಜುನಾಥ ಗೊಂಡಬಾಳ, ಅಮರೇಶಪ್ಪ ಎಸ್.ಜಿ. ಅವರು ಮಾತನಾಡಿದರು. ಗೃಹಲಕ್ಷ್ಮೀ ಯೋಜನೆಯಡಿ ಕೊಪ್ಪಳ ಜಿಲ್ಲೆಯ 3,21,019 ಫಲಾನುಭವಿಗಳಿಗೆ ಆಗಸ್ಟ್-2023 ರಿಂದ ಫೆಬ್ರವರಿ-2026ರ ವರೆಗೆ ಡಿಬಿಟಿ ಮೂಲಕ ಹಣ ಪಾವತಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಮಾರ್ಚ್-2026ರ ಅಂತ್ಯದವರೆಗೆ 2,89, 212 ಗ್ರಾಹಕರಿಗೆ ಉಚಿತ ವಿದ್ಯುತ್ ಸೌಲಭ್ಯ ದೊರೆತಿದ್ದು, ಇದಕ್ಕಾಗಿ ಇಲ್ಲಿಯವರೆಗೆ 388.23 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ 3,63,521 ಪಡಿತರ ಕಾರ್ಡ್ಗಳಿದ್ದು, ಅನ್ನಭಾಗ್ಯ ಯೋಜನೆಯಡಿ ಏಪ್ರಿಲ್-2026ರ ವರೆಗೆ ಪ್ರತಿ ಸದಸ್ಯರಿಗೆ 10 ಕೆ.ಜಿ ಯಂತೆ 12,393 ಮೆ.ಟನ್ ಪಡಿತರ ಆಹಾರ ಪದಾರ್ಥ ಹಂಚಿಕೆ ಮಾಡಲಾಗಿದೆ.

ಶಕ್ತಿ ಯೋಜನೆಯಡಿ ಮಾರ್ಚ್ -2026ರ ಮಾಹೆಯಲ್ಲಿ 34,84, 433 ಮಹಿಳೆಯರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದು, ಈ ಯೋಜನೆಯಡಿ ಜೂನ್-2023 ರಿಂದ ಮಾರ್ಚ್-2026ರ ವರೆಗೆ ಕೊಪ್ಪಳ ಜಿಲ್ಲೆಯಲ್ಲಿ 11,22,17,504 ಮಹಿಳೆಯರು ಸೌಲಭ್ಯ ಪಡೆದುಕೊಂಡಿದ್ದಾರೆ. ಯುವನಿಧಿ ಯೋಜನೆಯಡಿ ಜನವರಿ-2026 ರವರೆಗೆ 14,266 ಫಲಾನುಭವಿಗಳು ನೋಂದಣಿಯಾಗಿದ್ದು, ಜನವರಿ ಅಂತ್ಯದವರೆಗೆ ಒಟ್ಟು ಮೊತ್ತ ರೂ. 30,32,02,500 ಪಾವತಿಸಲಾಗಿರುತ್ತದೆ ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು, ಜಿಲ್ಲೆಯ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ತಾ.ಪಂ ಇಓ.ಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಲಬುರಗಿಯಲ್ಲಿ ಬಿಸಿಲಿನ ತಾಪಮಾನ ಹೆಚ್ಚಳ: ಹತ್ತಿ ಬಟ್ಟೆ ಧರಿಸುವಂತೆ ಸಾರ್ವಜನಿಕರಿಗೆ ಡಿ.ಸಿ. ಸಲಹೆ



ಕಲಬುರಗಿ,ಮೇ.01-

ಜಿಲ್ಲೆಯಾದ್ಯಂತ ಕಳೆದ ಮೂರು ದಿನಗಳಿಂದ ಸತತವಾಗಿ 45 ಡಿಗ್ರಿ ಸೆಲ್ಸಿಯಸ್‌ಗೂ ಅಧಿಕ ತಾಪಮಾನ ದಾಖಲಾಗುತ್ತಿರುವ ಹಿನ್ನೆಲೆ, ಹೀಟ್ ವೇವ್ (ಶಾಖದ ಹೊಡೆತ) ಮತ್ತು ಹೀಟ್ ಸ್ಟ್ರೋಕ್ ಅಪಾಯ ಹೆಚ್ಚಿರುವುದರಿಂದ ಸಾರ್ವಜನಿಕರು ವಿಶೇಷ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ಬಿ. ಫೌಝಿಯಾ ತರನ್ನಮ್ ಸಲಹೆ ನೀಡಿದ್ದಾರೆ.

ಮಧ್ಯಾಹ್ನ 12 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮನೆಯಿಂದ ಹೊರಹೋಗುವುದನ್ನು ಸಾಧ್ಯವಾದಷ್ಟು ತಪ್ಪಿಸಬೇಕು. ಅನಿವಾರ್ಯವಾಗಿ ಹೊರಗೆ ತೆರಳಬೇಕಾದರೆ ಕನ್ನಡಕ, ಛತ್ರಿ, ಟೋಪಿ, ಚಪ್ಪಲಿ ಅಥವಾ ಬೂಟುಗಳನ್ನು ಬಳಸಬೇಕು. ಪ್ರಯಾಣಿಕರು ತಮ್ಮೊಂದಿಗೆ ನೀರು ಕೊಂಡೊಯ್ಯಬೇಕು ಎಂದು ತಿಳಿಸಿದ್ದಾರೆ.

ಹಗುರವಾದ, ತಿಳಿ ಬಣ್ಣದ, ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಾಯಾರಿಕೆ ಇಲ್ಲದಿದ್ದರೂ ಸಾಕಷ್ಟು ನೀರು ಕುಡಿಯಬೇಕು. ತಾಪಮಾನ ಹೆಚ್ಚಿರುವ ಸಮಯದಲ್ಲಿ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸುವಂತೆ ಮನವಿ ಮಾಡಿದ್ದಾರೆ.

ರೈತರು, ಕಾರ್ಮಿಕರಿಗೆ ಸೂಚನೆ : ರೈತರು, ಕೃಷಿ ಕಾರ್ಮಿಕರು ಹಾಗೂ ಸಾರ್ವಜನಿಕರು ಮಧ್ಯಾಹ್ನ 12ರಿಂದ 3 ಗಂಟೆಯವರೆಗೆ ಹೊರಾಂಗಣ ಕೆಲಸಗಳನ್ನು ತಪ್ಪಿಸಬೇಕು. ಅಗತ್ಯವಿದ್ದರೆ ತಲೆ, ಕುತ್ತಿಗೆ, ಮುಖ ಹಾಗೂ ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆ ಬಳಸುವುದು ಒಳಿತು ಎಂದು ತಿಳಿಸಿದ್ದಾರೆ.

ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕುಪ್ರಾಣಿಗಳನ್ನು ಬಿಡಬಾರದು. ಮನೆ ತಂಪಾಗಿರಲು ಪರದೆ, ಶಟ್ರ್, ಸನ್‌ಶೇಡ್ ಬಳಸಬೇಕು. ತಣ್ಣೀರಿನಲ್ಲಿ ಸ್ನಾನ ಮಾಡುವುದು ಆರೋಗ್ಯಕರ ಎಂದಿದ್ದಾರೆ.

ಶಾಲೆ-ಕಾಲೇಜುಗಳಿಗೆ ಸೂಚನೆ : ಶಾಲಾ-ಕಾಲೇಜುಗಳಲ್ಲಿ ಕುಡಿಯುವ ನೀರಿನ ನಿರಂತರ ಲಭ್ಯತೆ ಖಚಿತಪಡಿಸಬೇಕು. ಬೆಳಿಗ್ಗೆ 11ರಿಂದ ಸಂಜೆ 4.30ರವರೆಗೆ ವಿದ್ಯಾರ್ಥಿಗಳ ಹೊರಾಂಗಣ ಚಟುವಟಿಕೆಗಳನ್ನು ತಪ್ಪಿಸಬೇಕು. ಮಕ್ಕಳಲ್ಲಿ ಶಾಖ ಸಂಬಂಧಿತ ರೋಗಲಕ್ಷಣಗಳ ಮೇಲ್ವಿಚಾರಣೆ ನಡೆಸಬೇಕು ಎಂದು ಸೂಚಿಸಿದ್ದಾರೆ.

ಆಸ್ಪತ್ರೆಗಳಲ್ಲಿ ಸಿದ್ಧತೆ :

ಜಿಲ್ಲೆಯ ಎಲ್ಲಾ ಪಿಎಚ್‌ಸಿ, ಸಿಎಚ್‌ಸಿ, ತಾಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ , ದ್ರವಗಳು, ಐಸ್ ಪ್ಯಾಕ್‌ಗಳ ದಾಸ್ತಾನು ಇರಬೇಕು. ಶಾಖದ ಕಾಯಿಲೆಗಳ ಚಿಕಿತ್ಸೆ ಗಾಗಿ ಸಿಬ್ಬಂದಿಯನ್ನು ಸಜ್ಜುಗೊಳಿಸಬೇಕು ಎಂದು ಸೂಚಿಸಿದ್ದಾರೆ. ಬಿಸಿಲಿನ ಶಾಖ ಹೆಚ್ಚಿರುವುದರಿಂದ ಆಲ್ಕೋಹಾಲ್, ಕಾರ್ಬೋನೇಟೆಡ್ ಪಾನೀಯಗಳು, ಚಹಾ, ಕಾಫಿ ಹಾಗೂ ಹಳೆಯ ಆಹಾರ ಸೇವಿಸಬಾರದು. ಬದಲಾಗಿ ಲಸ್ಸಿ , ಮಜ್ಜಿಗೆ, ನಿಂಬೆ ನೀರು, ತೋರಣಿ (ಅಕ್ಕಿ ನೀರು), ಸೇವಿಸಬೇಕು ಎಂದು ಸಲಹೆ ನೀಡಿದ್ದಾರೆ.

ಜಾನುವಾರುಗಳಿಗೂ ರಕ್ಷಣೆ ಅಗತ್ಯ :

ಜಾನುವಾರುಗಳನ್ನು ಬೆಳಗ್ಗೆ ಅಥವಾ ಸಂಜೆ ವೇಳೆಯಲ್ಲಿ ಮೇಯಿಸಬೇಕು. ಮಧ್ಯಾಹ್ನ ಹೊರಗೆ ಬಿಡಬಾರದು. ಉಪ್ಪು, ಬೆಲ್ಲ, ಲಿಂಬೆ ರಸ ಮಿಶ್ರಿತ ನೀರು ನೀಡಬೇಕು. ಶೆಡ್‌ಗಳನ್ನು ತಂಪಾಗಿಡಬೇಕು. ಕೋಳಿ ಶೆಡ್‌ಗಳಲ್ಲಿ ಗಾಳಿ ಹಾಗೂ ನೀರಿನ ವ್ಯವಸ್ಥೆ ಇರಬೇಕು ಎಂದು ತಿಳಿಸಿದ್ದಾರೆ.


ಜೆಸ್ಕಾಂಗೆ ಸೂಚನೆ :

ವಿದ್ಯುತ್ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ಆಸ್ಪತ್ರೆ ಹಾಗೂ ನೀರು ಸರಬರಾಜು ಘಟಕಗಳಿಗೆ ನಿರಂತರ ವಿದ್ಯುತ್ ಪೂರೈಕೆ ಇರಬೇಕು. ತುರ್ತು ದುರಸ್ತಿ ತಂಡ 247 ಸಿದ್ಧವಾಗಿರಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದ್ದಾರೆ.

ಬಿಸಿಲಿನಿಂದ ಮೂರ್ಛೆ, ತಲೆಸುತ್ತು, ವಾಂತಿ, ಜ್ವರದ ಲಕ್ಷಣಗಳು ಕಂಡುಬಂದರೆ ತಕ್ಷಣ ಸಮೀಪದ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ.

ಬಳ್ಳಾರಿ ಜಿಲ್ಲೆಯ ಎಲ್ಲಾ ಆಧಾರ್ ಕೇಂದ್ರಗಳಲ್ಲಿ ಮಕ್ಕಳಿಗೆ ಉಚಿತ ಆಧಾರ್ ಬಯೋಮೆಟ್ರಿಕ್ ಅವಕಾಶ

ಸಿರುಗುಪ್ಪ - ಬಳ್ಳಾರಿ ಜಿಲ್ಲಾದ್ಯಂತ 5 ರಿಂದ 17 ವರ್ಷ ಮಕ್ಕಳಿಗೆ ಕಡ್ಡಾಯ ಬಯೋಮೆಟ್ರಿಕ್ ಅಪ್ಡೇಟ್ ಮಾಡಿಸಲು ಬಳ್ಳಾರಿ ಜಿಲ್ಲೆಯ ಎಲ್ಲಾ ಆಧಾರ್ ಕೇಂದ್ರಗಳಲ್ಲಿ ಉಚಿತವಾಗಿ ಸೆಪ್ಟೆಂಬರ್ 30ರವರೆಗೆ ಅವಕಾಶ ಕಲ್ಪಿಸಲಾಗಿದೆ ಮಕ್ಕಳ ಆಧಾರ್ ಕಾರ್ಡ್ ನಲ್ಲಿ ಬಯೋಮೆಟ್ರಿಕ್ ಮಾಹಿತಿ ನವೀಕರಿಸಿದರೆ ಶಾಲಾ ದಾಖಲಾತಿ ಸ್ಪರ್ಧಾತ್ಮಕ ಪರೀಕ್ಷೆಗಳು ಸರಕಾರಿ ವಿವಿಧ ಯೋಜನೆಗಳು ವಿದ್ಯಾರ್ಥಿ ವೇತನ ಸೇರಿ ಶೈಕ್ಷಣಿಕ ಸವಲತ್ತುಗಳ ಲಾಭ ಪಡೆಯಲು ಅನುಕೂಲವಾಗಲಿದೆ ಪೋಷಕರು ಮಾಹಿತಿ ಅಪ್ಡೇಟ್ ಮಾಡಿಸಲು ಕಾಳಜಿ ವಹಿಸಬೇಕು ಬಳ್ಳಾರಿ ಜಿಲ್ಲಾಧಿಕಾರಿ ಕೆ ನಾಗೇಂದ್ರ ಪ್ರಸಾದ್ ಪ್ರಕಟಿಸಿದ್ದಾರೆ ಎಂದು ಲೋಕ ಶಿಕ್ಷಣ ಸಾಕ್ಷರತಾ ಸದಸ್ಯರು ಜನಾಭಿಪ್ರಾಯ ಮುಖಂಡರು ಸಾಮಾಜಿಕ ಕಾರ್ಯಕರ್ತ ಅಬ್ದುಲ್ ನಬಿಯವರು ತಿಳಿಸಿದ್ದಾರೆ.



ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವ

ಹುಲಿಗಿ ಕ್ಷೇತ್ರಕ್ಕೆ ಆಗಮಿಸುವ ಭಕ್ತರ ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಿ: ಡಿಸಿ



ಕೊಪ್ಪಳ,ಮೇ.01-

2026ರ ವಾರ್ಷಿಕ ಜಾತ್ರಾ ಮಹೋತ್ಸವದ ನಿಮಿತ್ತ ಹುಲಿಗಿ ಕ್ಷೇತ್ರಕ್ಕೆ ಆಗಮಿಸುವ ಭಕ್ತರ ವಾಹನ ನಿಲುಗಡೆಗೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಬೇಕೆಂದು ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಮಹೋತ್ಸವದ ನಿಮಿತ್ತ ಜಾತ್ರಾ ಕಾಲದಲ್ಲಿ ಸಂಚಾರ ದಟ್ಟಣೆಯನ್ನು ಸುಗಮಗೊಳಿಸಲು ವಾಹನಗಳನ್ನು ನಿಲ್ಲಿಸಲು ಕೋರಮಂಡಲ ಫ್ಯಾಕ್ಟರಿ ಜಾಗ ಹಾಗೂ ರೈಲ್ವೆ ಗೇಟಿನ ಆಚೆ ಬದಿಯಲ್ಲಿ ಹೊಸ ತುಂಗಭದ್ರ ಪ್ರೌಢಶಾಲೆಯ ಮುಂದಿನ ಬಯಲಿನಲ್ಲಿ ಹಾಗೂ ದೇವಸ್ಥಾನದ ನದಿ ಕಡೆ ಹೋಗುವ ಗೋಪುರದ ಹಿಂದಿನ ಬಯಲು ಪ್ರದೇಶದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲು ಇತ್ತೀಚೆಗೆ ನಡೆದ ಸಭೆಯಲ್ಲಿ ನಿರ್ಣಯಿಸಲಾಗಿದ್ದು, ಜಾತ್ರೆಯ ಪ್ರಮುಖ ದಿನಗಳಲ್ಲಿ ಯಾವುದೇ ರೀತಿಯ ವಾಹನಗಳನ್ನು ಕಮಾನಿನ ಒಳಗಡೆ ಬಿಡದಂತೆ ಹಾಗೂ ಜಾತ್ರಾ ಕಾಲದಲ್ಲಿ ಜನಸಂದಣಿ ತುಂಬಾ ಇರುವುದರಿಂದ, ಕಳ್ಳತನ ಪ್ರಕರಣಗಳು ತುಂಬ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಕಳ್ಳತನ, ಜೂಜಾಟಗಳನ್ನು ನಿಯಂತ್ರಿಸಲು ಪೊಲೀಸ್ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು.

★ಪೊಲೀಸ್ ಬಂದೋಬಸ್ತ್:★ ಆರಕ್ಷಕ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು ಕರ್ತವ್ಯ ನಿರ್ವಹಿಸಲು ಹಾಗೂ ಮುನಿರಾಬಾದ್ ಠಾಣಾ ಪೊಲೀಸರು ಸಹಕಾರ ನೀಡುವುದಾಗಿ ಸಭೆಯಲ್ಲಿ ಹಾಜರಿದ್ದ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳು, ಸಭೆಯ ಗಮನಕ್ಕೆ ತಂದರು. ಮೇ 10 ರಿಂದ 14ರ ವರೆಗೆ ಜಾತ್ರೆ ಇರುವುದರಿಂದ ಹೆಚ್ಚಿನ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿ ಜಾತ್ರೆಗೆ ಬಂದೋಬಸ್ತ್ ಒದಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಆರಕ್ಷಕ ಸಿಬ್ಬಂದಿಗಳನ್ನು ಬಂದೋಬಸ್ತ್ ಗೆ ನಿಯೋಜಿಸಲು ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಗೃಹ ರಕ್ಷಕ ದಳದವರನ್ನು ನಿಯೋಜಿಸಲು ವ್ಯವಸ್ಥೆ ಮಾಡಬೇಕು. ಜಾತ್ರೆಯ ಸಮಯದಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಲು, ಕ್ಷೇತ್ರದಲ್ಲಿ ಕಳ್ಳತನಗಳು, ಜೂಜಾಟಗಳನ್ನು ನಿಯಂತ್ರಿಸಲು ಅಹಿತಕರ ಘಟನೆಗಳು ಜರುಗದಂತೆ ತಾತ್ಕಾಲಿಕ ಹೊರ ಠಾಣೆಯ ವ್ಯವಸ್ಥೆ ಮಾಡಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ಆರಕ್ಷಕ ಸಿಬ್ಬಂದಿ ಹಾಗೂ ಗೃಹರಕ್ಷಕ ದಳದ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು ಕರ್ತವ್ಯ ನಿರ್ವಹಿಸಲು ಹಾಗೂ ಭಕ್ತಾದಿಗಳಿಗೆ ತಿಳುವಳಿಕೆಯನ್ನು ನೀಡಲು ಸೂಚನಾ ಫಲಕಗಳನ್ನು ಮತ್ತು ಧ್ವನಿವರ್ಧಕಗಳನ್ನು ಹಾಗೂ ದೇವಾಲಯದಲ್ಲಿ ಅವಶ್ಯಕತೆಗೆ ಅನುಗುಣವಾಗಿ ಸಿ.ಸಿ.ಕ್ಯಾಮರಾಗಳು ಇರುವುದಾಗಿ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು ಸಭೆಯ ಗಮನಕ್ಕೆ ತಂದರು.

ಪೊಲಿಸರ ಬೇಡಿ ಕೆಗನುಗುಣವಾಗಿ ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸಬೇಕು. ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ, ಎಲ್ಲಾ ರೀತಿಯ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಹಮ್ಮಿಕೊಳ್ಳಬೇಕೆಂದು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಭೀಕರ ಬರದ ಭವಿಷ್ಯ; ಭೀಷಣ ಬಿಸಿಲಿಗೆ ಬಲಿಯಾಗುತ್ತಿವೆ ಜೀವಗಳು; ಸರ್ಕಾರಗಳ ಮೈಮರೆವು ಅಕ್ಷಮ್ಯ



ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಈ ಬಾರಿ ಮುಂಗಾರು ಮಳೆ ಕೊರತೆಯ ಪ್ರಮಾಣ ಶೇ 92ರಷ್ಟು! ಇದು ನೀಡುವ ಸೂಚನೆಯೇನು? ಆಹಾರದ ಕೊರತೆ ಖಂಡಿತಾ ದೇಶವನ್ನು ಬಾಧಿಸಲಿದೆ. ಜನರು ಉಷ್ಣ ಹವಾಮಾನದಿಂದಾಗಿ ಸಾಯಲಿದ್ದಾರೆ. ಕಾಯಿಲೆಪೀಡಿತರು, ವಯಸ್ಸಾದವರು, ನವಜಾತ ಶಿಶುಗಳ ಜೀವಕ್ಕೆ ಎಲ್‌ನಿನೋ ನೇರವಾಗಿ ಹಾನಿ ಮಾಡಲಿದೆ. ಇದೆಲ್ಲವನ್ನೂ ಸಮರ್ಥವಾಗಿ ನಿಭಾಯಿಸುವ ಹೊಣೆಗಾರಿಕೆ ಜನಪ್ರತಿನಿಧಿಗಳು, ಸರ್ಕಾರಗಳದ್ದು. ದುರಂತವೆಂದರೆ ಅವರೆಲ್ಲ ಅಧಿಕಾರ ಹಿರಿಯಲು, ಕುರ್ಚಿ ಭದ್ರಪಡಿಸಿಕೊಳ್ಳಲು ಬಡಿದಾಡಿಕೊಳ್ಳುತ್ತಾ ಜನರ ಹಿತ ಮರೆಯುತ್ತಿವೆ. ಇದು ಅಕ್ಷಮ್ಯ.

ಈ ವರ್ಷ ಭಾರತ ಭೀಕರ ಬರಗಾಲ ಎದುರಿಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಈಗಾಗಲೇ ಎಚ್ಚರಿಕೆ ನೀಡಿವೆ. ಈ ಶತಮಾನದಲ್ಲೇ ಇದು ಭೀಕರ ಬರಗಾಲ ಎನಿಸಲಿದೆ. ಪೆಸಿಫಿಕ್ ಸಾಗರದಲ್ಲಿ ಐದಾರು ವರ್ಷಗಳಿಗೊಮ್ಮೆ ನೀರು ಬಿಸಿಯಾಗಿ ಏಳುವ ತೀವ್ರತರದ ಬಿಸಿಯ ಅಲೆಗಳನ್ನು ಎಲ್ ನಿನೋ ಎಂದು ಕರೆಯಲಾಗುತ್ತದೆ. ಎಲ್ ನಿನೋ ಮೇಲೆದ್ದಿತೆಂದರೆ ಭಾರತಕ್ಕೆ ಬರಗಾಲ ಖಂಡಿತ. ಎಲ್ ನಿನೋದಿಂದಾಗಿಯೇ ಭಾರತವು1876, 1899, 1918, 1965, 1972, 1987, 2002, 2009 ಮತ್ತು 2015-2018ರಲ್ಲಿ ಬರಗಾಲ ಅನುಭವಿಸಿದೆ. ಈ ವರ್ಷವೂ ಭಾರತ ಬರಗಾಲ ಎದುರಿಸಲಿದೆ ಎಂದು ಜಾಗತಿಕ ಹವಾಮಾನ ವರದಿಗಳು ಹೇಳುತ್ತಿವೆ. ಪೆಸಿಫಿಕ್ ಸಾಗರದಲ್ಲಿ ಎಲ್ ನಿನೋ ಉಂಟಾದರೆ ಅದರ ದುಷ್ಪರಿಣಾಮ ಏಷ್ಯಾದ ಹಲವು ದೇಶಗಳ ಮೇಲೆ ಆಗಲಿದೆ. ಈ ಸಾರಿ ಬರೇ ಎಲ್ ನಿನೋ ಬಂದಿಲ್ಲ. ಅದರ ರೂಪ ಭಯಂಕರವಾಗಿದೆ. ಹಾಗಾಗಿ ಈಗಿನದು ಸೂಪರ್ ಎಲ್ ನಿನೋ; ಎಂದು ಕರೆಯಲಾಗುತ್ತಿದೆ. ಒಟ್ಟಿನಲ್ಲಿ ಎಲ್‌ನಿನೋ ಅಂದ್ರೆ ಭೀಕರ ಬರ, ಆಹಾರಕ್ಕೆ ತತ್ವಾರ ಅಷ್ಟೇ. ಈ ಬರವನ್ನು ಎದುರಿಸಲು ಸರ್ಕಾರಗಳು ಹೇಗೆ ಸಿದ್ಧವಾಗುತ್ತವೆ ಎಂಬುದರ ಮೇಲೆ ಅದರ ನಂತರದ ಪರಿಣಾಮ ನಿರ್ಧಾರವಾಗುತ್ತದೆ.

ಸರಿಯಾಗಿ ಐದು ವರ್ಷಗಳ ಹಿಂದೆ ಕೊರೋನಾ ಸಾಂಕ್ರಾಮಿಕ ವಿಶ್ವದಗಲ ತನ್ನ ಕಬಂಧ ಬಾಹು ಚಾಚಿದಾಗ ಯಾವೆಲ್ಲ ದೇಶಗಳು ಹೇಗೆಲ್ಲ ಜವಾಬ್ದಾರಿಯಿಂದ ನಿಭಾಯಿಸಿದವು ಎಂಬುದು ನಮ್ಮ ಕಣ್ಣ ಮುಂದಿದೆ. ಯಾರೆಲ್ಲ ಮೈಮರೆತು ಲಕ್ಷಾಂತರ ಜೀವಗಳಿಗೆ ಕಂಟಕರಾದರು ಎಂಬುದೂ ಗೊತ್ತೇ ಇದೆ. ಕೊರೋನಾ ಮೊದಲ ಅಲೆ ಭಾರತಕ್ಕೆ ಬರುವುದಕ್ಕೂ ಮುನ್ನ ನೆರೆ ದೇಶಗಳಾದ ಚೀನಾ, ನೇಪಾಳವನ್ನು ಬಾಧಿಸಲು ಆರಂಭಿಸಿದಾಗ ಭಾರತ ಎಚ್ಚೆತ್ತುಕೊಳ್ಳಲಿಲ್ಲ. ಕೊರೋನಾ ಸುನಾಮಿಯಂತೆ ಭಾರತಕ್ಕೆ ಅಪ್ಪಳಿಸಲಿದೆ. ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಭಾರತಕ್ಕೆ ಕೊರೋನಾ ಪ್ರವೇಶಿಸದಂತೆ ತಡೆಯಲು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಎಚ್ಚರಿಸಿದ್ದ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರನ್ನು ಮೋದಿ ಸರ್ಕಾರದ ಮಂತ್ರಿಗಳು ಲಘುವಾಗಿ ಪರಿಗಣಿಸಿದ್ದರು. ಬೇಜವಾಬ್ದಾರಿಯ ಹೇಳಿಕೆ ನೀಡಿ ಜನರನ್ನು ಭಯಭೀತರನ್ನಾಗಿಸುತ್ತಿದ್ದಾರೆ ಎಂದು ಕೇಂದ್ರ ಆರೋಗ್ಯ ಸಚಿವರು ಹೇಳಿಕೆ ನೀಡಿದ್ದರು. ಅದಾದ ಎರಡೇ ತಿಂಗಳಿಗೆ ಕೊರೋನಾ ಅಕ್ಷರಶಃ ಸುನಾಮಿಯಂತೆ ಭಾರತಕ್ಕೆ ಕಾಲಿಟ್ಟು ತನ್ನ ರೌದ್ರಾವತಾರ ತೋರಿಸಿತ್ತು. ಆಗ ಮಾಡಿದ್ದೇ ಲಾಕ್‌ಡೌನ್. ಈ ಅವೈಜ್ಞಾನಿಕ ಮುಂದಾಲೋಚನೆ ಇಲ್ಲದ ಲಾಕ್‌ಡೌನ್ ದೇಶಾದ್ಯಂತ ಕಾರ್ಮಿಕವರ್ಗವನ್ನು ಸಾವಿರಾರು ಕಿಲೋಮೀಟರ್ ನಡೆಯುವಂತೆ ಮಾಡಿತ್ತು. ಲಕ್ಷಾಂತರ ಉದ್ಯಮಗಳು ಬಾಗಿಲು ಮುಚ್ಚಬೇಕಾಯ್ತು. ಅದರಿಂದ ಪಾಠ ಕಲಿಯದ ಸರ್ಕಾರ ಆದರೆ ಎರಡನೇ ಅಲೆ ಬರುತ್ತದೆ ಎಂಬ ಎಚ್ಚರಿಕೆಯನ್ನು ವಿಜ್ಞಾನಿಗಳು ನೀಡಿದ್ದರೂ ಆಸ್ಪತ್ರೆಗಳನ್ನು ಸಜ್ಜುಗೊಳಿಸದೇ, ಔಷಧಿ, ಆಕ್ಸಿಜನ್- ವೆಂಟಿಲೇಟರ್ ಸಿಗದೇ ಜನ ಸಾಯುವಂತಾಗಿತ್ತು. ಮೋದಿ ಪರಿವಾರ ಪಶ್ಚಿಮ ಬಂಗಾಳ, ಅಸ್ಸಾಂ ಸೇರಿದಂತೆ ಪಂಚರಾಜ್ಯಗಳ ಚುನಾವಣೆಯನ್ನು ಗೆಲ್ಲುವ ಸಲುವಾಗಿ ಭರ್ಜರಿ ಪ್ರಚಾರ ನಡೆಸುತ್ತಾ ಕೊರೋನಾವನ್ನು ಲೆಕ್ಕಿಸದ ಪರಿಣಾಮವಾಗಿ ಜನ ಹಾದಿ ಬೀದಿಯಲ್ಲಿ ಬಿದ್ದು ಸಾಯುವಂತಾಗಿತ್ತು.

ಐದೇ ಐದು ವರ್ಷಗಳಲ್ಲಿ ಮತ್ತೆ ಅದೇ ಬಗೆಯ ಬೇಜವಾಬ್ದಾರಿತನವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ತೋರಿಸುತ್ತಿವೆ. ಮೋದಿಯವರು ರಾಜ್ಯ ರಾಜ್ಯಗಳನ್ನು ಗೆಲ್ಲುವ ಆತುರದಲ್ಲಿ ಜನರ ಸಮಸ್ಯೆಗಳನ್ನು ಮರೆತಿದ್ದಾರೆ. ಈ ವರ್ಷ ಯುದ್ಧದ ಪರಿಣಾಮವಾಗಿ ದೇಶದ ಜಿಡಿಪಿ ಶೇ 1ರಷ್ಟು ಇಳಿಕೆಯಾಗಲಿದೆ ಎಂದು ಆರ್ಥಿಕ ತಜ್ಞರು ಅಂದಾಜಿಸಿದ್ದಾರೆ. ಭೀಕರ ಬರಗಾಲ ಬಂದರೆ ಆಹಾರಧಾನ್ಯ ಉತ್ಪಾದನೆ ಇಳಿಕೆಯಾದರೆ ಅದರ ಪರಿಣಾಮ ದೇಶದ ಆರ್ಥಿಕತೆಯ ಮೇಲೆ ಬೀರಲಿದೆ.

ಒಂದೂವರೆ ತಿಂಗಳಿನಿಂದ ಪಂಚರಾಜ್ಯಗಳ ಚುನಾವಣೆಯ ಪ್ರಚಾರಕ್ಕೆ ಕೇಂದ್ರ ಸರ್ಕಾರದ ಇಡೀ ಸಂಪುಟ ಸಚಿವರು ಮತ್ತು ಬಿಜೆಪಿ ಆಡಳಿತವಿರುವ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳು ಜಮಾಯಿಸಿದ್ದಾರೆ. ಎಲ್‌ನಿನೋ ಕಾಲಿಟ್ಟಿದೆ. ಬಿಸಿಲ ಧಗೆ ತಾಳಲಾರದೇ ಜನ ಸಾಯುವ ಸ್ಥಿತಿ ನಿರ್ಮಾಣವಾಗಿದೆ. ನರೇಗಾ ಕಾರ್ಮಿಕರು ಬಿರುಬಿಸಿಲಿನಲ್ಲಿ ರಟ್ಟೆ ಮುರಿದು ದುಡಿಯುತ್ತಿದ್ದಾರೆ. ರಾಯಚೂರಿನಲ್ಲಿ ಕೆಲಸ ಮಾಡುವಾಗ ನಿತ್ರಾಣಗೊಂಡು ಇಬ್ಬರು ಕಾರ್ಮಿಕರು ಮೃತಪಟ್ಟಿದ್ದಾರೆ. ಕೆರೆ-ಕೊಳ್ಳಗಳು ಬತ್ತಿವೆ. ಜಲಾಶಯಗಳು ಖಾಲಿಯಾಗಿವೆ. ಜನರಿಗೆ ಕುಡಿಯಲೂ ನೀರಿಲ್ಲ. ಇಂತಹ ಸಮಯದಲ್ಲಿ ಚುನಾವಣೆಯ ಪ್ರಚಾರ, ಫಲಿತಾಂಶ ಎಂದು ರಾಜಕೀಯ ಪಕ್ಷಗಳು ಸರ್ಕಾರಗಳು ಸ್ವಾರ್ಥದಲ್ಲೇ ಮೈಮರೆಯುತ್ತಿವೆ. ಕೇಂದ್ರದ ಸಚಿವ ಜ್ಯೋತಿರಾದಿತ್ಯ ಸಿಂಧ್ಯಾ ಚುನಾವಣೆಯ ಪ್ರಚಾರ ಸಭೆಯಲ್ಲಿ ಭಾಷಣ ಮಾಡುತ್ತಾ ಜೇಬಲ್ಲಿ ಒಂದು ಈರುಳ್ಳಿ ಇಟ್ಕೊಳ್ಳಿ ಸೆಕೆ ಆಗಲ್ಲ ಎಂದು ಹೇಳಿ ನಗೆ ಪಾಟಲಿಗೀಡಾಗಿದ್ದಾರೆ. ಚುನಾವಣೆಯ ಪ್ರಚಾರ ಸಭೆಗಳಿಗೆ ಜನರನ್ನು ಹಣ ಕೊಟ್ಟು ಕರೆಸಿ ಕುರಿಗಳನ್ನಾಗಿಸುತ್ತಿದ್ದಾರೆ. ಅದೇ ಜನರ ನಿತ್ಯದ ಬವಣೆಗಳಿಗೆ ಕಿವಿಯಾಗದ ಜನ ನಾಯಕರು ಎಲ್‌ನಿನೋ ಬಗ್ಗೆ, ಅದರ ಭೀಕರ ಪರಿಣಾಮದ ಬಗ್ಗೆ ಕಿಂಚಿತ್ತೂ ಗಮನ ಹರಿಸಿಲ್ಲ.

ಈ ಸಲ ಮಳೆ ಕಡಿಮೆ, ವರ್ಷವಿಡೀ ಉಷ್ಣತೆ ಹೆಚ್ಚು ಇರಲಿದೆ. ಬಿಸಿ ಗಾಳಿ ಬೀಸಲಿದೆ ಎಂದು ಹವಾಮಾನ ತಜ್ಞರು ಎಚ್ಚರಿಸಿದ್ದರು. ಅದರ ಅನುಭವ ಈಗಾಗಲೇ ಆಗತೊಡಗಿದೆ. ಆದರೆ ರಾಜಕಾರಣಿಗಳು ಬರದಲ್ಲೂ ಹದ್ದಿನಂತೆ ಎರಗಿ ಹಣ ಮಾಡುತ್ತಾರೆ. ಬರ ಅಂದ್ರೆ ಎಲ್ಲರಿಗೂ ಇಷ್ಟ ( ) ಎಂಬ ಖ್ಯಾತ ಪತ್ರಕರ್ತ ಪಿ.ಸಾಯಿನಾಥ್ ಪುಸ್ತಕ ಕಡು ವಾಸ್ತವ. ಬರ ಬಂದ್ರೆ, ಪ್ರವಾಹ ಬಂದ್ರೆ ಸಂಕಷ್ಟದಲ್ಲಿರುವ ಜನರ ನೆರವಿಗೆ ಸರ್ಕಾರ ಹಣ ಬಿಡುಗಡೆ ಮಾಡುತ್ತದೆ. ಬಡವರಿಗಾಗಿ ಬಿಡುಗಡೆಯಾದ ಆ ಹಣದಲ್ಲಿ ಕಮಿಷನ್ ಹೊಡೆಯುವ ಜನಪ್ರತಿನಿಧಿಗಳು, ಅಧಿಕಾರಿಗಳಿಂದ ನಿರೀಕ್ಷೆ ಮಾಡುವುದು ಏನೂ ಇಲ್ಲ. ಅದು ಅವರ ಪಾಲಿಗೆ ಕಾಮಧೇನು, ಕಲ್ಪವೃಕ್ಷ.

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಈ ಬಾರಿ ಮುಂಗಾರು ಮಳೆ ಕೊರತೆಯ ಪ್ರಮಾಣ ಶೇ 92ರಷ್ಟು! ಇದು ನೀಡುವ ಸೂಚನೆಯೇನು? ಆಹಾರದ ಕೊರತೆ ಖಂಡಿತಾ ದೇಶವನ್ನು ಬಾಧಿಸಲಿದೆ. ಜನರು ಉಷ್ಣ ಹವಾಮಾನದಿಂದಾಗಿ ಸಾಯಲಿದ್ದಾರೆ. ಕಾಯಿಲೆಪೀಡಿತರು, ವಯಸ್ಸಾದವರು, ನವಜಾತ ಶಿಶುಗಳ ಜೀವಕ್ಕೆ ಎಲ್‌ನಿನೋ ನೇರವಾಗಿ ಹಾನಿ ಮಾಡಲಿದೆ. ಇದೆಲ್ಲವನ್ನೂ ಸಮರ್ಥವಾಗಿ ನಿಭಾಯಿಸುವ ಹೊಣೆಗಾರಿಕೆ ಜನಪ್ರತಿನಿಧಿಗಳು, ಸರ್ಕಾರಗಳದ್ದು. ದುರಂತವೆಂದರೆ ಅವರೆಲ್ಲ ಅಧಿಕಾರ ಹಿರಿಯಲು, ಕುರ್ಚಿ ಭದ್ರಪಡಿಸಿಕೊಳ್ಳಲು ಬಡಿದಾಡಿಕೊಳ್ಳುತ್ತಾ ಜನರ ಹಿತ ಮರೆಯುತ್ತಿವೆ. ಇದು ಅಕ್ಷಮ್ಯ. ಬರ ಎದುರಿಸಲು ಎಲ್ಲ ಸರ್ಕಾರಗಳು ಕಾರ್ಯಕ್ರಮಗಳನ್ನು ರೂಪಿಸಬೇಕಿದೆ. ಕೇಂದ್ರ ಸರ್ಕಾರವು ಮಲತಾಯಿ ಧೋರಣೆ ತೋರದೇ ಎಲ್ಲ ಪ್ರಜೆಗಳ ಹಿತಕ್ಕಾಗಿ ವಿಶಾಲ ಮನಸ್ಸಿನಿಂದ ಕೆಲಸ ಮಾಡಬೇಕಿದೆ. ನ್ಯಾಯಯುತವಾಗಿ ಪರಿಹಾರ ಬಿಡುಗಡೆ ಮಾಡುವ ಮೂಲಕ ಒಕ್ಕೂಟ ತತ್ವವನ್ನೂ ಪಾಲಿಸಬೇಕಿದೆ.

ಅಂಗಳದಲ್ಲಿ 'ಆರ್‌ಸಿಬಿ' ಅತಿದೊಡ್ಡ ಬ್ರ್ಯಾಂಡ್ ಆಗಿ ಬೆಳೆದದ್ದೇ ಒಂದು ವಿಸ್ಮಯ



ವಿರಾಟ್ ಕೊಹ್ಲಿಯ ಬದ್ಧತೆ ಮತ್ತು ಆರ್‌ಸಿಬಿ ಮೇಲಿನ ಪ್ರೀತಿ, ಅಭಿಮಾನಿಗಳನ್ನು ತಂಡದೊಂದಿಗೆ ಭಾವನಾತ್ಮಕವಾಗಿ ಬೆಸೆದಿದೆ. ಕೊಹ್ಲಿ ಜೊತೆ ಕ್ರಿಸ್ ಗೇಲ್, ಎಬಿ ಡಿವಿಲಿಯರ್ಸ್, ರಾಹುಲ್ ದ್ರಾವಿಡ್, ಅನಿಲ್ ಕುಂಬ್ಳೆ ಸೇರಿದಂತೆ ವಿಶ್ವದ ಹಲವು ದಿಗ್ಗಜ ಆಟಗಾರರು ಆರ್‌ಸಿಬಿ ಪರವಾಗಿ ಕೇವಲ ಪಂದ್ಯಗಳನ್ನು ಆಡಲಿಲ್ಲ, ಬದಲಾಗಿ ಪ್ರತಿ ಪಂದ್ಯವನ್ನೂ ಒಂದು ಬಾಕ್ಸ್ ಆಫೀಸ್ ಶೋ ಆಗಿ ಪರಿವರ್ತಿಸಿದರು. ಸೋಲು-ಗೆಲುವಿನ ಲೆಕ್ಕಾಚಾರವನ್ನು ಬದಿಗೊತ್ತಿ, ಕೇವಲ ಇವರ ಆಟವನ್ನು ನೋಡಲು ಬರುವ ನಿಷ್ಠಾವಂತ ಅಭಿಮಾನಿ ಬಳಗ ಸೃಷ್ಟಿಯಾಯಿತು. ಇದು ಪ್ರಾಯೋಜಕರ ಪಾಲಿಗೆ ಹೇಳಿ ಮಾಡಿಸಿದ ಮಾರುಕಟ್ಟೆಯಾಗಿತ್ತು

ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಇತಿಹಾಸದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ಪಯಣ ಕ್ರೀಡಾ ಮಾರುಕಟ್ಟೆಯ ಒಂದು ವಿಶಿಷ್ಟ ಅಧ್ಯಾಯ. ಕಳೆದ 17 ವರ್ಷಗಳಲ್ಲಿ ಪುರುಷರ ತಂಡ ಒಮ್ಮೆಯೂ ಐಪಿಎಲ್ ಟ್ರೋಫಿ ಎತ್ತಿ ಹಿಡಿಯದಿದ್ದರೂ, ಆರ್‌ಸಿಬಿ ಈ ಟೂರ್ನಿಯ ಅತ್ಯಂತ ಪ್ರಭಾವಶಾಲಿ ಹಾಗೂ ದೊಡ್ಡ ಬ್ರ್ಯಾಂಡ್ ಆಗಿ ಬೆಳೆದು ನಿಂತಿರುವುದು ಜಾಗತಿಕ ಕ್ರೀಡಾ ಜಗತ್ತಿನ ಅಚ್ಚರಿಗಳಲ್ಲಿ ಒಂದು. ಕೇವಲ ಗೆಲುವು-ಸೋಲುಗಳಾಚೆಗೆ ಒಂದು ಫ್ರಾಂಚೈಸಿ ಇಷ್ಟೊಂದು ಜನಪ್ರಿಯತೆ ಗಳಿಸಲು ಹೇಗೆ ಸಾಧ್ಯವಾಯಿತು ಎಂಬ ಪ್ರಶ್ನೆಗೆ ಉತ್ತರ ಹುಡುಕುತ್ತಾ ಹೋದರೆ, ಸಿಗುವುದು ಬೆಟ್ಟದಷ್ಟಿರುವ ಅಭಿಮಾನಿಗಳ ಅಲ್ಲಾಡದ ತಳಪಾಯ ಮತ್ತು ತಂಡದ ವ್ಯವಸ್ಥಿತ ಮಾರುಕಟ್ಟೆ ತಂತ್ರ.

ಆರ್‌ಸಿಬಿಯ ಆರ್ಥಿಕ ಬೆಳವಣಿಗೆ ಕ್ರೀಡಾ ರಂಗದಲ್ಲಿ ನಿಜಕ್ಕೂ ಒಂದು ವಿಸ್ಮಯ. 2008ರಲ್ಲಿ ಕೇವಲ 450 ಕೋಟಿ ರೂ.ಗಳಿಗೆ ಮಾರಾಟವಾಗಿದ್ದ ಫ್ರಾಂಚೈಸಿ, ಇಂದು ಆದಿತ್ಯ ಬಿರ್ಲಾ, ಟೈಮ್ಸ್ ಆಫ್ ಇಂಡಿಯಾ, ಬೋಲ್ಟ್ ವೆಂಚರ್ಸ್ ಮತ್ತು ಬ್ಲಾಕ್‌ಸ್ಟೋನ್ ಒಳಗೊಂಡ ಕನ್ಸೋರ್ಟಿಯಂಗೆ ಬರೋಬ್ಬರಿ 16,660 ಕೋಟಿ ರೂ. (ಸುಮಾರು 1.78 ಬಿಲಿಯನ್ ಡಾಲರ್) ಗಳಿಗೆ ಮಾರಾಟವಾಗಿದೆ. ಅಂದರೆ, ಕಳೆದ 18 ವರ್ಷಗಳಲ್ಲಿ ಬಂಡವಾಳದ ಮೇಲಿನ ಪ್ರತಿಫಲ ಸುಮಾರು 37 ಪಟ್ಟು ಹೆಚ್ಚಾಗಿದೆ. ಕಪ್ ಗೆಲ್ಲದಿದ್ದರೂ ಬ್ರ್ಯಾಂಡ್ ಲಾಯಲ್ಟಿ ಮತ್ತು ನಿರಂತರ ಮಾರುಕಟ್ಟೆ ತಂತ್ರಗಳಿಂದ ಇಷ್ಟು ದೊಡ್ಡ ಮೊತ್ತದ ಮೌಲ್ಯವರ್ಧನೆ ಮಾಡಲು ಸಾಧ್ಯ ಎಂಬುದಕ್ಕೆ ಇದೊಂದು ಅತ್ಯುತ್ತಮ ಉದಾಹರಣೆ.

ಈ ಸಲ ಕಪ್ ನಮ್ದೇ ಇದು ಕೇವಲ ಒಂದು ಘೋಷವಾಕ್ಯವಲ್ಲ, ಬದಲಾಗಿ ಕೋಟ್ಯಂತರ ಕನ್ನಡಿಗರ ಹಾಗೂ ಆರ್‌ಸಿಬಿ ಅಭಿಮಾನಿಗಳ ಜೀವನಾಡಿ. ಪ್ರತಿ ವರ್ಷವೂ ಐಪಿಎಲ್ ಆರಂಭಕ್ಕೂ ಮುನ್ನ ಇದೇ ಉತ್ಸಾಹ, ಸೋತಾಗಲೂ ಮುಂದಿನ ವರ್ಷ ಗೆಲ್ಲುತ್ತೇವೆ ಎಂಬ ಅದೇ ಭರವಸೆ. ಆರ್‌ಸಿಬಿಯ ಅತಿ ದೊಡ್ಡ ಶಕ್ತಿಯೇ ಈ 12 (12ನೇ ಆಟಗಾರರ ಪಡೆ). ವಿಶ್ವದ ಯಾವುದೇ ಮೂಲೆಯಲ್ಲಿ ಪಂದ್ಯ ನಡೆದರೂ, ಕ್ರೀಡಾಂಗಣದಲ್ಲಿ ಕೆಂಪು-ಚಿನ್ನದ ಬಣ್ಣದ ಜೆರ್ಸಿ ತೊಟ್ಟ ಅಭಿಮಾನಿಗಳು ರಾರಾಜಿಸುತ್ತಾರೆ. ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದ ಈ ನಿಷ್ಠೆಯೇ ಆರ್‌ಸಿಬಿ ಬ್ರ್ಯಾಂಡ್ ಮೌಲ್ಯವನ್ನು ಸದಾ ಉತ್ತುಂಗದಲ್ಲಿಟ್ಟಿದೆ.

ಕ್ರೀಡಾ ಜಗತ್ತಿನಲ್ಲಿ ಸಾಮಾನ್ಯವಾಗಿ ತಂಡದ ಯಶಸ್ಸು ಅದರ ಗೆಲುವಿನ ಮೇಲೆ ನಿಂತಿರುತ್ತದೆ. ಆದರೆ, ಆರ್‌ಸಿಬಿ ಈ ನಿಯಮವನ್ನು ಮುರಿದು ಸ್ಟಾರ್ ವರ್ಚಸ್ಸಿನ ಮೇಲೆ ಬ್ರ್ಯಾಂಡ್ ಕಟ್ಟಿತು. ಆರ್‌ಸಿಬಿ ಬ್ರ್ಯಾಂಡ್‌ನ ಅಸ್ತಿತ್ವವನ್ನು ವಿರಾಟ್ ಕೊಹ್ಲಿ ಅವರಿಲ್ಲದೆ ಕಲ್ಪಿಸಿಕೊಳ್ಳುವುದು ಅಸಾಧ್ಯ. 2008ರಿಂದಲೂ ಐಪಿಎಲ್‌ನಲ್ಲಿ ಒಂದೇ ಫ್ರಾಂಚೈಸಿಗೆ ಆಡುತ್ತಿರುವ ಏಕೈಕ ಆಟಗಾರ ಎಂಬ ಹೆಗ್ಗಳಿಕೆ ಕೊಹ್ಲಿಯದ್ದು. ವಿರಾಟ್ ಕೊಹ್ಲಿ ಕೇವಲ ಒಬ್ಬ ಕ್ರಿಕೆಟಿಗನಲ್ಲ, ಅವರು ವಿಶ್ವಮಟ್ಟದ ಅತಿದೊಡ್ಡ ಬ್ರ್ಯಾಂಡ್. ಅವರ ಆಕ್ರಮಣಕಾರಿ ಆಟ, ಮೈದಾನದಲ್ಲಿನ ಉತ್ಸಾಹ ಮತ್ತು ಜಾಗತಿಕ ಮಟ್ಟದ ಜನಪ್ರಿಯತೆ ನೇರವಾಗಿ ಆರ್‌ಸಿಬಿಗೆ ವರ್ಗಾವಣೆಯಾಗಿದೆ.

ಕೊಹ್ಲಿಯ ಬದ್ಧತೆ ಮತ್ತು ಆರ್‌ಸಿಬಿ ಮೇಲಿನ ಪ್ರೀತಿ, ಅಭಿಮಾನಿಗಳನ್ನು ತಂಡದೊಂದಿಗೆ ಭಾವನಾತ್ಮಕವಾಗಿ ಬೆಸೆದಿದೆ. ಕೊಹ್ಲಿ ಜೊತೆ ಕ್ರಿಸ್ ಗೇಲ್, ಎಬಿ ಡಿವಿಲಿಯರ್ಸ್, ರಾಹುಲ್ ದ್ರಾವಿಡ್, ಅನಿಲ್ ಕುಂಬ್ಳೆ ಸೇರಿದಂತೆ ವಿಶ್ವದ ಹಲವು ದಿಗ್ಗಜ ಆಟಗಾರರು ಕೇವಲ ಪಂದ್ಯಗಳನ್ನು ಆಡಲಿಲ್ಲ, ಬದಲಾಗಿ ಪ್ರತಿ ಪಂದ್ಯವನ್ನೂ ಒಂದು ಬಾಕ್ಸ್ ಆಫೀಸ್ ಶೋ ಆಗಿ ಪರಿವರ್ತಿಸಿದರು. ಸೋಲು-ಗೆಲುವಿನ ಲೆಕ್ಕಾಚಾರವನ್ನು ಬದಿಗೊತ್ತಿ, ಕೇವಲ ಇವರ ಆಟವನ್ನು ನೋಡಲು ಬರುವ ನಿಷ್ಠಾವಂತ ಅಭಿಮಾನಿ ಬಳಗ ಸೃಷ್ಟಿಯಾಯಿತು. ಇದು ಪ್ರಾಯೋಜಕರ ಪಾಲಿಗೆ ಹೇಳಿ ಮಾಡಿಸಿದ ಮಾರುಕಟ್ಟೆಯಾಗಿತ್ತು.

ಐಪಿಎಲ್‌ನ ಆರಂಭಿಕ ವರ್ಷಗಳಿಂದಲೂ ಆರ್‌ಸಿಬಿ ಎಂದರೆ ಗ್ಲಾಮರ್ ಮತ್ತು ಸ್ಟಾರ್ ಆಟಗಾರರ ತವರುಮನೆ. ಕ್ರಿಸ್ ಗೇಲ್ ಅವರ ದೈತ್ಯ ಸಿಕ್ಸರ್‌ಗಳು, ಎಬಿ ಡಿವಿಲಿಯರ್ಸ್ ಅವರ 360 ಡಿಗ್ರಿ ಮ್ಯಾಜಿಕ್ ತಂಡಕ್ಕೆ ಅಪಾರ ಮನರಂಜನಾ ಮೌಲ್ಯವನ್ನು ತಂದುಕೊಟ್ಟವು. ಟ್ರೋಫಿ ಗೆಲ್ಲದಿದ್ದರೂ, ವೀಕ್ಷಕರಿಗೆ ಭರ್ಜರಿ ಮನರಂಜನೆ ನೀಡುವಲ್ಲಿ ಈ ಆಟಗಾರರು ಎಂದಿಗೂ ವಿಫಲರಾಗಲಿಲ್ಲ. ಪಂದ್ಯವೊಂದು ಸೋತರೂ ಪರವಾಗಿಲ್ಲ, ಅದ್ಭುತ ಆಟ ನೋಡಿದ ತೃಪ್ತಿ ಅಭಿಮಾನಿಗಳಿಗೆ ಸಿಗುತ್ತಿತ್ತು. ಈ ಬಾಕ್ಸ್ ಆಫೀಸ್ ಕ್ರಿಕೆಟ್ ಶೈಲಿಯೇ ಆರ್‌ಸಿಬಿಯನ್ನು ಪ್ರಾಯೋಜಕರ ನೆಚ್ಚಿನ ತಂಡವನ್ನಾಗಿ ಮಾಡಿತು.

ಸಾಮಾಜಿಕ ಜಾಲತಾಣಗಳಲ್ಲಿ ಆರ್‌ಸಿಬಿಯ ಪ್ರಭಾವ ಅಸಾಧಾರಣವಾದದ್ದು. ಇನ್ಸ್ಟಾಗ್ರಾಮ್ (2.3 ಕೋಟಿ), ಎಕ್ಸ್ (73 ಲಕ್ಷ), ಫೇಸ್‌ಬುಕ್(1.12 ಕೋಟಿ) ಹಾಗೂ ಯೂಟ್ಯೂಬ್‌ಗಳಲ್ಲಿ(0.75 ಲಕ್ಷ) ತಂಡವು ಕೋಟ್ಯಂತರ ಹಿಂಬಾಲಕರನ್ನು ಹೊಂದಿದೆ. ಜಾಗತಿಕ ಅಂಕಿ-ಅಂಶಗಳ ಪ್ರಕಾರ, ಏಷ್ಯಾದಲ್ಲಿ ಅತಿ ಹೆಚ್ಚು ಎಂಗೇಜ್‌ಮೆಂಟ್ (ಪ್ರತಿಕ್ರಿಯೆ) ಪಡೆಯುವ ಕ್ರೀಡಾ ತಂಡಗಳಲ್ಲಿ ಆರ್‌ಸಿಬಿ ಮುಂಚೂಣಿಯಲ್ಲಿದೆ. ರಿಯಲ್ ಮ್ಯಾಡ್ರಿಡ್, ಮ್ಯಾಂಚೆಸ್ಟರ್ ಯುನೈಟೆಡ್ ನಂತಹ ಜಾಗತಿಕ ಫುಟ್ಬಾಲ್ ಕ್ಲಬ್‌ಗಳಿಗೆ ಪೈಪೋಟಿ ನೀಡುವ ಮಟ್ಟದಲ್ಲಿ ಆರ್‌ಸಿಬಿಯ ಡಿಜಿಟಲ್ ಹೆಜ್ಜೆಗುರುತು ಪ್ರಬಲವಾಗಿದೆ.

ಹೌಲಿಹಾನ್ ಲೋಕಿ ( ) ಯಂತಹ ಅಂತಾರಾಷ್ಟ್ರೀಯ ಸಂಸ್ಥೆಗಳು ಬಿಡುಗಡೆ ಮಾಡುವ ಐಪಿಎಲ್ ಬ್ರ್ಯಾಂಡ್ ಮೌಲ್ಯಮಾಪನ ವರದಿಗಳನ್ನು ಗಮನಿಸಿದರೆ, ಆರ್‌ಸಿಬಿ ಸದಾ ಟಾಪ್ 3 ಅಥವಾ 4ನೇ ಸ್ಥಾನದಲ್ಲಿರುತ್ತದೆ. ವರದಿಗಳ ಅಂದಾಜಿನಂತೆ ಆರ್‌ಸಿಬಿ ಫ್ರಾಂಚೈಸಿಯ ಬ್ರ್ಯಾಂಡ್ ಮೌಲ್ಯ ಸುಮಾರು 70 ಮಿಲಿಯನ್ ಡಾಲರ್ (ಸುಮಾರು 600 ಕೋಟಿ ರೂ.) ಗಡಿಯಲ್ಲಿದೆ. ಕಪ್ ಗೆಲ್ಲದಿದ್ದರೂ, ಶರ್ಟ್ ಮೇಲಿನ ಪ್ರಾಯೋಜಕತ್ವದಿಂದ, ಮರ್ಚಂಡೈಸ್ (ಜೆರ್ಸಿ ಮಾರಾಟ) ಹಾಗೂ ಟಿವಿ ಹಕ್ಕುಗಳಿಂದ ತಂಡವು ಪ್ರತಿ ವರ್ಷ ಕೋಟ್ಯಂತರ ರೂಪಾಯಿ ಆದಾಯ ಗಳಿಸುತ್ತಿದೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ಕೇವಲ ಒಂದು ಕ್ರಿಕೆಟ್ ತಂಡವಾಗಿ ಉಳಿದಿಲ್ಲ, ಅದೊಂದು ಲೈಫ್ ಸ್ಟೈಲ್ ಬ್ರ್ಯಾಂಡ್ ಆಗಿ ವಿಕಸನಗೊಂಡಿದೆ. ಆರ್‌ಸಿಬಿ ಬಾರ್ ಅಂಡ್ ಕೆಫೆ, ಪ್ರತಿ ವರ್ಷವೂ ಕ್ರೀಡಾಂಗಣದಲ್ಲಿ ನಡೆಯುವ ಆರ್‌ಸಿಬಿ ಅನ್‌ಬಾಕ್ಸ್ ಈವೆಂಟ್‌ಗಳ ಮೂಲಕ ತಂಡವು ತನ್ನ ವ್ಯಾಪ್ತಿಯನ್ನು ವಿಸ್ತರಿಸಿದೆ. ಕ್ರಿಕೆಟ್ ಹೊರತಾಗಿಯೂ ಯುವಜನತೆಯನ್ನು ಆಕರ್ಷಿಸುವಂತಹ ಫಿಟ್ನೆಸ್, ಫ್ಯಾಷನ್ ಮತ್ತು ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವರ್ಷವಿಡೀ ಅಭಿಮಾನಿಗಳೊಂದಿಗೆ ನಿರಂತರ ಸಂಪರ್ಕದಲ್ಲಿರುವ ತಂತ್ರವನ್ನು ಫ್ರಾಂಚೈಸಿ ಅಳವಡಿಸಿಕೊಂಡಿದೆ.

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಆರ್‌ಸಿಬಿಯ ಅಜೇಯ ಕೋಟೆ. ಇಲ್ಲಿನ ವಾತಾವರಣವೇ ಟಿವಿ ಪ್ರಸಾರಕರಿಗೆ ದೊಡ್ಡ ಆಕರ್ಷಣೆ. ಕ್ರೀಡಾಂಗಣದಲ್ಲಿನ ಟಿಕೆಟ್ ಮಾರಾಟದಿಂದ ಬರುವ ಆದಾಯ ಹಾಗೂ ಆ ಪಂದ್ಯಗಳಿಗೆ ಸಿಗುವ ಟಿವಿ ವೀಕ್ಷಕರ ಸಂಖ್ಯೆ () ಐಪಿಎಲ್ ಮಾರುಕಟ್ಟೆಗೆ ಆಧಾರಸ್ತಂಭವಾಗಿದೆ. ತಂಡ ಸತತವಾಗಿ ಸೋಲುತ್ತಿದ್ದರೂ, ಮುಂದಿನ ಪಂದ್ಯಕ್ಕೆ ಕ್ರೀಡಾಂಗಣ ಕಿಕ್ಕಿರಿದು ತುಂಬಿರುವುದು, ಆರ್‌ಸಿಬಿ ಬ್ರ್ಯಾಂಡ್ ಮೇಲಿರುವ ವಿಶ್ವಾಸ ಮತ್ತು ಅಭಿಮಾನಿಗಳ ಅಚಲ ನಿಷ್ಠೆಯನ್ನು ಎತ್ತಿ ತೋರಿಸುತ್ತದೆ.

ವರ್ಷಗಳ ಕಪ್ ಬರವನ್ನು ಮೊದಲು ನೀಗಿಸಿದ್ದು ಮಾತ್ರ ಮಹಿಳಾ ತಂಡ! 2024ರಲ್ಲಿ ಸ್ಮೃತಿ ಮಂಧಾನ ನಾಯಕತ್ವದ ಆರ್‌ಸಿಬಿ ಮಹಿಳಾ ತಂಡ ವುಮೆನ್ಸ್ ಪ್ರೀಮಿಯರ್ ಲೀಗ್ () ಚಾಂಪಿಯನ್ ಆಗಿ ಹೊರಹೊಮ್ಮಿದ್ದು ಇಡೀ ಆರ್‌ಸಿಬಿ ಬ್ರ್ಯಾಂಡ್‌ಗೆ ಹೊಸ ಚೈತನ್ಯ ನೀಡಿತು. ಈ ಸಲ ಕಪ್ ನಮ್ದೇ ಎಂಬ ಆಸೆ ಈ ಸಲ ಕಪ್ ನಮ್ದು ಎಂದು ಸಾಕಾರಗೊಂಡಾಗ ಕೇವಲ ಅಭಿಮಾನಿಗಳಷ್ಟೇ ಅಲ್ಲ, ಮಾರುಕಟ್ಟೆಯೂ ಸಂಭ್ರಮಿಸಿತು. ಆನಂತರ 2025ರಲ್ಲಿ ಪುರುಷರ ಸಾಧನೆ ದೊಡ್ಡ ಮೈಲಿಗಲ್ಲಿ ಸೃಷ್ಟಿಸಿತು. ಈ ಐತಿಹಾಸಿಕ ಗೆಲುವುಗಳು ಆರ್‌ಸಿಬಿಯ ವಾಣಿಜ್ಯ ಮೌಲ್ಯವನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ದಿದೆ.

ಆರ್‌ಸಿಬಿ ಕ್ರೀಡೆಯಲ್ಲಿ ಗೆಲುವು, ಚಾಂಪಿಯನ್ ಪಟ್ಟ ಎಂಬ ಮಾತುಗಳನ್ನು ಸುಳ್ಳು ಮಾಡಿ, ಕೇವಲ ಭಾವನೆಗಳು, ಸ್ಟಾರ್ ಆಟಗಾರರ ವರ್ಚಸ್ಸು ಮತ್ತು ನಿಷ್ಠಾವಂತ ಅಭಿಮಾನಿಗಳ ಪಡೆಯಿಂದಲೇ ಒಂದು ಬೃಹತ್ ವಾಣಿಜ್ಯ ಸಾಮ್ರಾಜ್ಯವನ್ನು ಕಟ್ಟಬಹುದು ಎಂಬುದನ್ನು ಆರ್‌ಸಿಬಿ ಸಾಬೀತುಪಡಿಸಿದೆ. ಟ್ರೋಫಿ ಗೆಲ್ಲದಿರುವುದು ಒಂದು ಸಣ್ಣ ಕೊರತೆಯಾಗಿದ್ದರೂ, ಆರ್‌ಸಿಬಿ ಎಂಬ ಉತ್ಪನ್ನ ಮಾತ್ರ ಎಂದೆಂದಿಗೂ ಕ್ರಿಕೆಟ್ ಜಗತ್ತಿನ ಮುಕುಟಮಣಿಯಾಗಿ ಬೆಳಗುತ್ತಿದೆ.

ಇದೆಲ್ಲದರ ಜೊತೆ ಆರ್‌ಸಿಬಿ ಮೇಲಿನ ಪ್ರೀತಿ ಮತ್ತು ಅಭಿಮಾನ ಇಂದು ಮಿತಿಮೀರಿ ಉನ್ಮಾದವಾಗಿ ಬದಲಾಗಿರುವುದು ಅತ್ಯಂತ ಆತಂಕಕಾರಿ. ಕಳೆದ ವರ್ಷ (2025) ತಂಡವು ಚೊಚ್ಚಲ ಕಪ್ ಗೆದ್ದಾಗ ಜಗಜ್ಜಾಹೀರಾದ ಈ ಅಂಧಾಭಿಮಾನದ ದುರಂತ ಮುಖ, ವಿಜಯೋತ್ಸವದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಉಂಟಾದ ಕಾಲ್ತುಳಿತದಲ್ಲಿ 11 ಮಂದಿ ಅಮಾಯಕರನ್ನು ಬಲಿಪಡೆದದ್ದು ಕ್ರೀಡಾ ಇತಿಹಾಸದಲ್ಲಿಯೇ ಅಳಿಸಲಾಗದ ಕಪ್ಪುಚುಕ್ಕೆಯಾಗಿದೆ. ಕ್ರೀಡೆ ಮತ್ತು ತಂಡದ ಮೇಲೆ ಕೇವಲ ಪ್ರೀತಿ ಹಾಗೂ ಅಭಿಮಾನ ಇರಬೇಕೇ ಹೊರತು, ಅಮಾಯಕರ ಜೀವವನ್ನೇ ಕಸಿದುಕೊಳ್ಳುವಂತಹ ಉನ್ಮಾದ ಖಂಡಿತಾ ಬೇಡ ಎಂಬುದನ್ನೇ ಈ ಘಟನೆ ನಮಗೆ ಕಲಿಸುವ ಕಟು ವಾಸ್ತವದ ಪಾಠವಾಗಿದೆ.

ತಂಡದ ಯಶಸ್ಸನ್ನು ನಾವು ಸಂಭ್ರಮಿಸೋಣ, ಆದರೆ ಆ ಸಂಭ್ರಮವು ಮನುಷ್ಯತ್ವ ಮತ್ತು ಶಿಸ್ತಿನ ಎಲ್ಲೆ ಮೀರದಿರಲಿ.

ಪಶ್ಚಿಮ ಬಂಗಾಳದಲ್ಲಿ ಇವಿಎಂ ಅಕ್ರಮ: ಒಂದೇ ವಾದದ ಸುತ್ತ ಚುನಾವಣಾ ಆಯೋಗದ ಪ್ರದಕ್ಷಿಣೆ!

ದೇಶದಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸುವ ಹೊಣೆ ಚುನಾವಣಾ ಆಯೋಗದ್ದು. ಆದರೆ ಕಳೆದ 10 ವರ್ಷಗಳಿಗೂ ಅಧಿಕ ಸಮಯದಿಂದ ನಡೆಯುತ್ತಿರುವುದು ತದ್ವಿರುದ್ಧ. ಆಯೋಗದ ವಿರುದ್ಧ ಎಷ್ಟು ಆರೋಪಗಳು ಕೇಳಿಬಂದರೂ ಒಂದೇ ವಾದದ ಸುತ್ತ ಆಯೋಗ ಪ್ರದಕ್ಷಿಣೆ ಹಾಕುತ್ತಿದೆ. 'ನಾವು ಎಲ್ಲ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸುತ್ತೇವೆ' ಎಂದು ಹೇಳುತ್ತಲೇ ಇದೆ.

ಪಶ್ಚಿಮ ಬಂಗಾಳದಲ್ಲಿ ಚುನಾವಣೆಗಳು ಎಂದಿಗೂ ರಾಜಕೀಯ ಜಿದ್ದಾಜಿದ್ದಿ ಮತ್ತು ವಿವಾದಗಳ ಕೇಂದ್ರಬಿಂದುವಾಗಿಯೇ ಉಳಿದಿದೆ. 2026ರ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿಯೂ ವಿವಾದಗಳು ಮುಂದುವರಿದಿದೆ. ಈ ಬಾರಿ ಬಿಜೆಪಿಯ ಬಾಲಂಗೋಚಿಯಂತೆ ಬಿಂಬಿತಗೊಳ್ಳುತ್ತಿರುವ ಚುನಾವಣಾ ಆಯೋಗದ ಪಾತ್ರದ ಬಗ್ಗೆ ಹಲವು ಗಂಭೀರ ಆರೋಪಗಳು ಕೇಳಿಬಂದಿವೆ. ಚುನಾವಣೆಗೂ ಮುನ್ನ ತರಾತುರಿಯಲ್ಲಿ ನಡೆಸಲಾದ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಮತ್ತು ಚುನಾವಣೆಯ ಹಲವು ಹಂತಗಳಲ್ಲಿ ನಡೆದ ಅಕ್ರಮಗಳು ಜನಸಾಮಾನ್ಯರು, ವಿವಿಧ ಪಕ್ಷಗಳಲ್ಲಿ ಪ್ರಶ್ನೆಗಳನ್ನು ಹುಟ್ಟುಹಾಕಿವೆ. ಆಯೋಗ ಮಾತ್ರ ಎಲ್ಲವೂ ಸರಿಯಾಗಿದೆ ಎಂಬ ತಮ್ಮ ಎಂದಿನ ವಾದ ನಡುವಿಟ್ಟು ಅಲ್ಲೇ ಪ್ರದಕ್ಷಿಣೆ ಹಾಕುತ್ತಿದೆ. ನಾವು ಎಲ್ಲ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸುತ್ತೇವೆ ಎಂದು ಹೇಳುತ್ತಲೇ ಇದೆ.

ದೇಶದಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸುವ ಹೊಣೆ ಚುನಾವಣಾ ಆಯೋಗದ್ದು. ಆದರೆ ಕಳೆದ 10 ವರ್ಷಗಳಿಗೂ ಅಧಿಕ ಸಮಯದಿಂದ ನಡೆಯುತ್ತಿರುವುದು ತದ್ವಿರುದ್ಧ. ಆಯೋಗವು ವಿವಿಧ ರಾಜಕೀಯ ಪಕ್ಷಗಳಿಂದ ಟೀಕೆ ಮತ್ತು ಕಾನೂನು ಹೋರಾಟಗಳನ್ನು ಎದುರಿಸುತ್ತಿದೆ. ಮುಖ್ಯವಾಗಿ ಅಧಿಕಾರಿಗಳ ವರ್ಗಾವಣೆ, ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಇವಿಎಂ ಅಕ್ರಮಗಳ ವಿಚಾರದಲ್ಲಿ ಆಯೋಗದ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ. ಪಶ್ಚಿಮ ಬಂಗಾಳದಲ್ಲಂತೂ ಬಿಜೆಪಿಯ ಎಕ್ಸ್ ಖಾತೆ ಯಾವುದು? ಚುನಾವಣೆ ಆಯೋಗದ ಎಕ್ಸ್ ಖಾತೆ ಯಾವುದು? ಎಂದು ನಾವು ಗುರುತಿಸಲು ಸಾಧ್ಯವಾಗದಷ್ಟೂ ಪರಿಸ್ಥಿತಿ ಕೈ ಮೀರಿದೆ. ಟಿಎಂಸಿ ಪಕ್ಷಕ್ಕೆ ಬಹಿರಂಗವಾಗಿ ಬೆದರಿಕೆ ಹಾಕುವ ಹಂತಕ್ಕೆ ಚುನಾವಣಾ ಆಯೋಗ ತಲುಪಿದೆ.

ಚುನಾವಣೆ ಘೋಷಣೆಯಾದ ಬೆನ್ನಲ್ಲೇ ಚುನಾವಣಾ ಆಯೋಗವು ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿ, ಡಿಜಿಪಿ ಮತ್ತು ಹಲವಾರು ಜಿಲ್ಲಾಧಿಕಾರಿಗಳನ್ನು () ಏಕಪಕ್ಷೀಯವಾಗಿ ವರ್ಗಾವಣೆ ಮಾಡಿತು. ಇದನ್ನು ಪ್ರಶ್ನಿಸಿದಾಗ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಯನ್ನು ನಡೆಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಆಯೋಗ ಹೇಳಿಕೊಂಡಿದೆ. ''ರಾಜ್ಯ ಸರ್ಕಾರದ ಆಡಳಿತ ಯಂತ್ರವನ್ನು ದುರ್ಬಲಗೊಳಿಸಲು ಮತ್ತು ಕೇಂದ್ರದ ಆಡಳಿತಾರೂಢ ಪಕ್ಷಕ್ಕೆ ಅನುಕೂಲ ಮಾಡಿಕೊಡಲು ಆಯೋಗವು ಈ ಕ್ರಮ ಕೈಗೊಂಡಿದೆ'' ಎಂದು ಆಡಳಿತಾರೂಢ ಟಿಎಂಸಿ ಆರೋಪಿಸಿದೆ. ಈ ಬಗ್ಗೆ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿಯನ್ನೂ ಸಲ್ಲಿಸಲಾಗಿತ್ತು. ಆದರೆ ಚುನಾವಣೆ ಸಮಯದಲ್ಲಿ ವರ್ಗಾವಣೆಗಳು ಸಾಮಾನ್ಯ ಪ್ರಕ್ರಿಯೆ ಎಂಬ ಕಾರಣಕ್ಕೆ ಕೋರ್ಟ್ ಮಧ್ಯಪ್ರವೇಶಿಸಲು ನಿರಾಕರಿಸಿದೆ.

ಬಿಹಾರದಲ್ಲಿ ಚುನಾವಣೆಗೂ ಮುನ್ನ ಚುನಾವಣಾ ಆಯೋಗ ತರಾತುರಿಯಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆಸಿದರ ಪರಿಣಾಮ ಏನಾಗಿದೆ ಎಂಬುದು ಎಲ್ಲರಿಗೂ ತಿಳಿದಿರುವುದು. ಅದರ ಮುಂದುವರೆದ ಭಾಗವಾಗಿ, ಪಶ್ಚಿಮ ಬಂಗಾಳದಲ್ಲಿ ಈ ಅವಾಂತರ ನಡೆದಿದೆ. ಪಶ್ಚಿಮ ಬಂಗಾಳದಲ್ಲಿ ಬಳಿಕ ಮತದಾರರ ಪಟ್ಟಿಯಿಂದ ಲಕ್ಷಾಂತರ ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ.

91 ಲಕ್ಷಕ್ಕೂ ಹೆಚ್ಚು ಹೆಸರುಗಳನ್ನು ಅಳಿಸಿಹಾಕಲಾಗಿದೆ. ಈ ಪೈಕಿ ಸುಮಾರು 34 ಲಕ್ಷ ಮತದಾರರ ಹೆಸರುಗಳನ್ನು ಉದ್ದೇಶಪೂರ್ವಕವಾಗಿ ತೆಗೆದುಹಾಕಲಾಗಿದೆ ಎಂದು ಟಿಎಂಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ. ಇದನ್ನು ಮತ ಕಳ್ಳತನ ಎಂದು ವಿಪಕ್ಷಗಳು ಕರೆಯುತ್ತಿವೆ. ಪ್ರಮುಖವಾಗಿ ಮುಸ್ಲಿಮರು, ಮಹಿಳೆಯರು, ಈವರೆಗೆ ಟಿಎಂಸಿ, ಕಾಂಗ್ರೆಸ್‌ನ ಮತ ಬ್ಯಾಂಕ್ ಆಗಿದ್ದ ಹಿಂದುಳಿದ ವರ್ಗಕ್ಕೆ ಸೇರಿದ ಜನರ ಹೆಸರೇ ಹೆಚ್ಚಾಗಿ ಮತದಾರರ ಪಟ್ಟಿಯಿಂದ ಡಿಲೀಟ್ ಆಗಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿವೆ. ಆಯೋಗವು ದತ್ತಾಂಶಗಳನ್ನು ತಿರುಚುತ್ತಿದೆ ಎಂಬ ಆರೋಪಗಳು ಕೇಳಿಬಂದಿದೆ.

ಅದರಲ್ಲೂ ಚುನಾವಣಾ ಕೆಲಸದಲ್ಲಿರುವ ಸಿಬ್ಬಂದಿಗೆ ಮತದಾನದ ಹಕ್ಕು ಇಲ್ಲದಿರುವುದು ವಿಪರ್ಯಾಸ. ಪ್ರಕ್ರಿಯೆಯ ನಂತರ ಮತದಾರರ ಪಟ್ಟಿಯಿಂದ ಕನಿಷ್ಠ 65 ಅಧಿಕಾರಿಗಳ ಹೆಸರುಗಳನ್ನು ತೆಗೆದುಹಾಕಲಾಗಿತ್ತು. ಚುನಾವಣಾ ಕರ್ತವ್ಯದಲ್ಲಿದ್ದರೂ ಮತದಾನ ಮಾಡಲು ಹಕ್ಕಿಲ್ಲ! ಇದನ್ನು ಪ್ರಶ್ನಿಸಿ ಈ ಅಧಿಕಾರಿಗಳು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದು, ವಿಚಾರಣೆ ನಡೆದಿದೆ. ಆದರೆ ಈ ಹಂತದಲ್ಲಿ ಮಧ್ಯಪ್ರವೇಶಿಸಲು ನಿರಾಕರಿಸಿದ ಕೋರ್ಟ್, ಮೇಲ್ಮನವಿ ಪ್ರಾಧಿಕಾರವನ್ನು ಸಂಪರ್ಕಿಸುವಂತೆ ಸೂಚಿಸಿದೆ.

ಇನ್ನೊಂದೆಡೆ ಒಂದೇ ಹೆಸರಿನಲ್ಲಿ ಅಥವಾ ಒಂದೇ ಭಾವಚಿತ್ರ ಇರುವ ಹಲವಾರು ಮತದಾನದ ಗುರುತಿನ ಚೀಟಿಗಳು ಇರುವ ಬಗ್ಗೆ ದೂರುಗಳು ದಾಖಲಾಗಿವೆ. ಮೃತಪಟ್ಟವರ ಅಥವಾ ಆ ಪ್ರದೇಶದಿಂದ ದಶಕಗಳ ಹಿಂದೆಯೇ ವಲಸೆ ಹೋದವರ ಹೆಸರುಗಳು ಇನ್ನೂ ಪಟ್ಟಿಯಲ್ಲಿದೆ. ಆದರೆ ಅಲ್ಲೇ ದಶಕಗಳಿಂದ ಇರುವ ಮತದಾರರ ಹೆಸರು ಅಳಿಸಿ ಹಾಕಲಾಗಿದೆ! ರಾಜ್ಯದ ಒಟ್ಟು ಮತದಾರರ ಸಂಖ್ಯೆಯಲ್ಲಿ ಸುಮಾರು 12% ರಷ್ಟು ಇಳಿಕೆಯಾಗಿದೆ.

ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ

ಸಿಂಧನೂರು,ಮೇ.01-

ಬಸನಗೌಡ ಫೌಂಡೇಶನ್ ವತಿಯಿಂದ ಮೇ 03-2026. ರವಿವಾರದಂದು. ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ.5001. ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ. ಹಾಗೂ ಬಸನಗೌಡ ಬಾದರ್ಲಿ ಅವರು ವಿಧಾನ ಪರಿಷತ್ ಶಾಸಕರಾದ ನಂತರ ಒಂದು ವರ್ಷದ ಸಾಧನೆಯ ಕೃತಿ



ಅನಾವರಣ ಕಾರ್ಯಕ್ರಮವವನ್ನು ಹಮ್ಮಿಕೊಳ್ಳಲಾಗಿದ್ದು. ಇಂದು ಯುದ್ದಲ ದೊಡ್ಡಿ ಹಾಗೂ ಅಡವಿ ಅಮರೇಶ್ವರ ಶ್ರೀಗಳ ಸಾನಿಧ್ಯದಲ್ಲಿ ಗುರು ಹಿರಿಯರ ನೇತೃತ್ವದಲ್ಲಿ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದ. ವಧು ವರರಿಗೆ ವಿಧಾನಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರು ಸಮವಸ್ತ್ರವನ್ನು ವಿತರಣೆ ಮಾಡಿದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR